# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 104 | MONDAY 29-06-2026 | PRGI No : KNKAN/26/A0962 | Pages:4 | Rs.2.00 | M: 9742418836


## ವಕ್ಫ್ ಆಸ್ತಿ ವಿವಾದ ಮತ್ತೆ ಮುನ್ನೆಲೆಗೆ



ಬೆಂಗಳೂರು: ರಾಜ್ಯದಲ್ಲಿ ವಕ್ಫ್ ಆಸ್ತಿ ವಿವಾದ ಮತ್ತೆ ಮುನ್ನೆಲೆಗೆ ಬಂದಿದೆ. ಸುಮಾರು 1.80 ಲಕ್ಷಕ್ಕೂ ಹೆಚ್ಚು ರೈತರ ಆರ್‌ಟಿಸಿಗಳಲ್ಲಿ ವಕ್ಫ್ ಹೆಸರು ಉಲ್ಲೇಖವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪತ್ರಿಕಾ ವರದಿಯನ್ನು ಉಲ್ಲೇಖಿಸಿ ಟ್ವೀಟ್ ಮಾಡಿರುವ ಅವರು, ರಾಜ್ಯದ ವಿವಿಧ ಭಾಗಗಳಲ್ಲಿ ಸುಮಾರು 1 ಲಕ್ಷ 80 ಸಾವಿರ ರೈತರ ಆರ್‌ಟಿಸಿಗಳಲ್ಲಿ ಈಗಾಗಲೇ ವಕ್ಫ್ ಹೆಸರು ದಾಖಲಾಗಿದೆ. ರೈತರ ಭೂಮಿಯನ್ನು ವಕ್ಫ್ ವಿವಾದಕ್ಕೆ ಸಿಲುಕಿಸಿ ಕಾಂಗ್ರೆಸ್ ಸರ್ಕಾರ ಯಾರ ಹಿತ ಕಾಯುತ್ತಿದೆ ಎಂದು ಪ್ರಶ್ನಿಸಿದ್ದಾರೆ.

ಕೂಡಲೇ ಈ ಸಂಪೂರ್ಣ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ, ರೈತರ ಆರ್‌ಟಿಸಿಗಳಲ್ಲಿ ದಾಖಲಾಗಿರುವ ಎಲ್ಲಾ ವಿವಾದಾತ್ಮಕ ಉಲ್ಲೇಖಗಳನ್ನು ಮರು ಪರಿಶೀಲಿಸಿ ರಾಜ್ಯದ ಜನರ ಮುಂದೆ ಶ್ವೇತಪತ್ರ ಬಿಡುಗಡೆ ಮಾಡಿ ಎಂದು ಅವರು ಒತ್ತಾಯಿಸಿದ್ದಾರೆ.

ರಾಜ್ಯ ಸರ್ಕಾರದ ಓಲೈಕೆ ಮತ್ತು ತುಷ್ಟೀಕರಣದ ರಾಜಕಾರಣ ಈಗ ನಾಡಿನ ರೈತರ ಅಸ್ತಿತ್ವಕ್ಕೆ ಕುತ್ತು ತರುವ ಹಂತ ತಲುಪಿದೆ. ರಾಜ್ಯಾದ್ಯಂತ ರೈತರ ಆರ್‌ಟಿಸಿಗಳಲ್ಲಿ ವಕ್ಫ್ ಉಲ್ಲೇಖಗಳನ್ನು ದಾಖಲಿಸಲಾಗುತ್ತಿದೆ ಎಂಬ ವರದಿಗಳು ಬಂದಿವೆ.

ಈಗಾಗಲೇ 1 ಲಕ್ಷ 80 ಸಾವಿರಕ್ಕೂ ಹೆಚ್ಚು ರೈತರ ಆರ್‌ಟಿಸಿ ವಕ್ಫ್ ಹೆಸರು ದಾಖಲಾಗಿದೆ. ಒಟ್ಟು 3 ಲಕ್ಷ ಆರ್‌ಟಿಸಿಗಳನ್ನು ವಕ್ಫ್ ವ್ಯಾಪ್ತಿಗೆ ತರಲು ಪ್ರಕ್ರಿಯೆ ನಡೆಯುತ್ತಿದೆ ಎಂದು ಹೇಳಲಾಗಿದೆ. ರೈತರು ಆತಂಕದಲ್ಲಿದ್ದಾರೆ. ಸರ್ಕಾರ ಈ ಬಗ್ಗೆ ಸತ್ಯ ತಿಳಿಸುವ ಕೆಲಸ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ವಿವಿಧ ಜಿಲ್ಲೆಗಳಲ್ಲಿ ರೈತರ ಆರ್‌ಟಿಸಿಗಳಲ್ಲಿ ವಕ್ಫ್ ಆಸ್ತಿ ಎಂದು ಉಲ್ಲೇಖವಾಗಿರುವ ಮಾಹಿತಿಯನ್ನು ಹಂಚಿಕೊಂಡಿರುವ ಅವರು, ಈ ವರದಿಗಳು ತಪ್ಪಾಗಿದ್ದರೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡಲೇ ಸತ್ಯಾಂಶವನ್ನು ರೈತರಿಗೆ ತಿಳಿಸಬೇಕು ಎಂದು ಆಗ್ರಹಿಸಿದ್ದಾರೆ.

## ಕರ್ನಾಟಕದ ಆರೋಗ್ಯ ಸೇವೆ ದೇಶದಲ್ಲೇ ಉತ್ತಮ: ಸಿಎಂ

ಬೆಂಗಳೂರು: "ಮಕ್ಕಳ ಭವಿಷ್ಯಕ್ಕಾಗಿ ಸರ್ಕಾರ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ರೂಪಿಸಿದ್ದು, ರಾಜ್ಯದ ಎಲ್ಲಾ ಭಾಗದ ಪೋಷಕರು ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಬೇಕು. ಆರೋಗ್ಯಕರ ಕುಟುಂಬದಿಂದ ಆರೋಗ್ಯಕರ ರಾಜ್ಯ ಹಾಗೂ ದೇಶ ನಿರ್ಮಾಣ ಸಾಧ್ಯ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರದ ತಮ್ಮ ನಿವಾಸದಲ್ಲಿ ಶಿವಕುಮಾರ್ ಅವರು ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಭಾನುವಾರ ಮಾತನಾಡಿದರು.

"ಆರೋಗ್ಯ ಸಚಿವ ಯು ಟಿ ಖಾದರ್ ಅವರು ಬಹಳ ಬುದ್ಧಿವಂತರು. ನನ್ನ ಮೊಮ್ಮಗಳಿಗೆ ಒಂದು ತಿಂಗಳು. ಹೀಗಾಗಿ ಈ ಕಾರ್ಯಕ್ರಮಕ್ಕೆ ನನ್ನ ಮನೆಯನ್ನೇ ಆಯ್ಕೆ ಮಾಡಿದ್ದಾರೆ. ಮುಖ್ಯಮಂತ್ರಿ ಮನೆಯಿಂದ ಈ ಅಭಿಯಾನ ಆರಂಭವಾಗಲಿ ಎಂಬುದು ಖಾದರ್ ಅವರ ಸದಾಶಯ. ಹೀಗಾಗಿ ನನ್ನ ಮನೆಯಲ್ಲೇ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಲು ತೀರ್ಮಾನಿಸಿದ್ದಾರೆ" ಎಂದು ತಿಳಿಸಿದರು.

"ಈ ಕಾರ್ಯಕ್ರಮದಲ್ಲಿ 36,686 ಲಸಿಕಾ ಕೇಂದ್ರಗಳು, 988 ಸಂಚಾರಿ ಕೇಂದ್ರಗಳು, 2,125 ಪಾಯಿಂಟ್ ಗಳು ಸೇರಿದಂತೆ ಒಟ್ಟು 1,14,213 ಲಸಿಕಾ ಕಾರ್ಯಕರ್ತರು ಕೆಲಸ ಮಾಡುತ್ತಿದ್ದಾರೆ. ಅನೇಕ ಎನ್ ಜಿಓ ಗಳು ಅಭಿಯಾನಕ್ಕೆ ಕೈಜೋಡಿಸಿವೆ. ದೇಶ ಸೇವೆಯ ಈ ಕಾರ್ಯಕ್ರಮಕ್ಕೆ ಸಹಕಾರ ನೀಡಿರುವ ಎಲ್ಲರಿಗೂ ತುಂಬು ಹೃದಯದಿಂದ ಶುಭ ಕೋರುವೆ" ಎಂದರು.



"60.84 ಲಕ್ಷ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲು ನಮ್ಮ ಸರ್ಕಾರ ತೀರ್ಮಾನಿಸಿದೆ. 1972ರಲ್ಲಿ ಇಂದಿರಾ ಗಾಂಧಿ ಅವರು ದೇಶದ ಮಕ್ಕಳು ಆರೋಗ್ಯವಾಗಿ ಇರಬೇಕು ಎಂದು ಪೋಲಿಯೋ ಲಸಿಕೆ ಕಾರ್ಯಕ್ರಮ ಮಾಡಿದರು.

ರಾಜೀವ್ ಗಾಂಧಿ ಅವರ ಕಾಲದಲ್ಲಿ ಇದು ಅಭಿಯಾನವಾಗಿ ಪ್ರಾರಂಭವಾಯಿತು. ಮನಮೋಹನ್ ಸಿಂಗ್ ಅವರ ಕಾಲದಲ್ಲಿ ಭಾರತ ಪೋಲಿಯೋ ಮುಕ್ತ ದೇಶವಾಯಿತು" ಎಂದು ತಿಳಿಸಿದರು.

"ನಮ್ಮ ದೇಶ ಬಲಿಷ್ಠವಾಗಿದೆ. ನೆರೆ ರಾಷ್ಟ್ರಗಳಿಂದ ಮತ್ತೆ ಪೋಲಿಯೋ ಬಾರದಂತೆ ತಡೆಯಲು ನಾವು ಈ ಅಭಿಯಾನ ಮಾಡುತ್ತಿದ್ದೇವೆ.

ವಿಶ್ವ ಪೋಲಿಯೋ ಲಸಿಕಾ ದಿನದ ಹಿನ್ನೆಲೆಯಲ್ಲಿ ನಮ್ಮ ಸರ್ಕಾರ ಇಂದು ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಲಸಿಕೆ ನೀಡಿ ಯಾವುದೇ ಮಕ್ಕಳು ಅಂಗವೈಕಲ್ಯಕ್ಕೆ ಒಳಗಾಗಬಾರದು ಎಂದು ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ" ಎಂದರು.

**ರಾಜ್ಯದ ಆರೋಗ್ಯ ಸೇವೆ ದೇಶದಲ್ಲಿ ಎಲ್ಲೂ ಇಲ್ಲ:**

"ಆರೋಗ್ಯಕರ ಕರ್ನಾಟಕ ನಿರ್ಮಾಣಕ್ಕೆ ಪ್ರತಿ ಹಂತದಲ್ಲಿ ಕಾರ್ಯಕ್ರಮ ರೂಪಿಸಿದೆ. ನಮ್ಮ ಸರ್ಕಾರೇತರ ಸಂಸ್ಥೆಗಳು, ಅಧಿಕಾರಿಗಳು ಉತ್ತಮ ಸಹಕಾರ ನೀಡುತ್ತಿದ್ದು, ಅವರಿಗೆ ಅಭಿನಂದನೆಗಳು. ಈ ದೇಶವನ್ನು ಪೋಲಿಯೋ ಮುಕ್ತ ಮಾಡಲಾಗಿದೆ. ಖಾದರ್ ಅವರಿಗೆ ಅಪಾರ ಅನುಭವವಿದೆ. ಅವರು ಈ ಜವಾಬ್ದಾರಿ ಹೊತ್ತಿದ್ದಾರೆ. ನಮ್ಮ ರಾಜ್ಯದ ಆರೋಗ್ಯ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಬಲಿಷ್ಠವಾಗಿದ್ದು, ಹೊರಗಿನಿಂದ ಜನರು ಇಲ್ಲಿನ ಹೆಲ್ತ್ ಟೂರಿಸಂಗೆ ಬರುತ್ತಿದ್ದಾರೆ. ಆರೋಗ್ಯ ಸೇವೆಗೆ ನಮ್ಮ ರಾಜ್ಯಕ್ಕೆ ಬರುತ್ತಿದ್ದಾರೆ" ಎಂದು ತಿಳಿಸಿದರು.

"ನಮ್ಮ ರಾಜ್ಯದಲ್ಲಿ ಪ್ರತಿವರ್ಷ 13,940 ವೈದ್ಯರನ್ನು ತಯಾರು ಮಾಡುತ್ತೇವೆ. 1.07 ಲಕ್ಷ ಆರೋಗ್ಯ ಸೇವೆ ಸಿಬ್ಬಂದಿ ತಯಾರು ಮಾಡುತ್ತಿದ್ದೇವೆ. ಇಡೀ ಭಾರತದಲ್ಲಿ ಇಷ್ಟು ಗುಣಮಟ್ಟದ ವೈದ್ಯಕೀಯ ಸೇವೆ ಎಲ್ಲೂ ಇಲ್ಲ. ನಮ್ಮ ರಾಜ್ಯದ ಕಾಲೇಜುಗಳಲ್ಲಿ ಓದಿ ವೈದ್ಯರಾದವರು ವಿಶ್ವದ ಅನೇಕ ರಾಷ್ಟ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ಕಳೆದ ಮೂರು ವರ್ಷಗಳಿಂದ ನಮ್ಮ ಸರ್ಕಾರ ಆರೋಗ್ಯ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಪ್ರಸ್ತಾವನೆಗಳಿಗೆ ಆದ್ಯತೆ ಮೇರೆಗೆ ಒಪ್ಪಿಗೆ ನೀಡುತ್ತಿದ್ದೇವೆ" ಎಂದು ಹೇಳಿದರು.

## ಪೋಲಿಯೊ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ

**ಬೆಳಗಾವಿ ವಾರ್ತೆ ಅಥಣಿ:** ಪೋಲಿಯೊ ಮುಕ್ತ ಸಮಾಜ ನಿರ್ಮಾಣವು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಆರೋಗ್ಯವಂತ ಮಕ್ಕಳೇ ದೇಶದ ಭವಿಷ್ಯವಾಗಿರುವುದರಿಂದ ಪೊ?ಷಕರು ನಿರ್ಲಕ್ಷ್ಯ ವಹಿಸದೆ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸಬೇಕು ಎಂದು ಶಾಸಕ ಲಕ್ಷ್ಮಣ ಸವದಿ ತಿಳಿಸಿದರು.

ಅವರು ಭಾನುವಾರ ತಾಲೂಕಾ ಸಾರ್ವಜನಿಕ ಆಸ್ಪತ್ರೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೊ ಅಭಿಯಾನಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಐದು ವರ್ಷದೊಳಗಿನ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಮಕ್ಕಳ ಆರೋಗ್ಯವೇ ದೇಶದ ಅಮೂಲ್ಯ ಸಂಪತ್ತು. ಪೊ?ಲಿಯೋ ಎಂಬ ಮಾರಕ ಕಾಯಿಲೆಯನ್ನು ಸಂಪೂರ್ಣ ನಿರ್ಮೂಲನೆ ಮಾಡಲು ಪ್ರತಿಯೊಬ್ಬ ಪೊ?ಷಕರು ಐದು ವರ್ಷದೊಳಗಿನ ತಮ್ಮ ಮಕ್ಕಳಿಗೆ ತಪ್ಪದೇ ಪಲ್ಸ್ ಪೊ?ಲಿಯೋ ಲಸಿಕೆ ಹಾಕಿಸಬೇಕು.



ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಎಲ್ಲರೂ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಕರೆ ನೀಡಿದರು.

ಈ ವೇಳೆ ತಾಲೂಕಾ ಆರೋಗ್ಯಾಧಿಕಾರಿ ಬಸಗೌಡಾ ಕಾಗೆ ಮಾತನಾಡಿ ಹಿಂದೆ ಎಷ್ಟೇ ಬಾರಿ ಪೋಲಿಯೊ ಲಸಿಕೆ ಹಾಕಿಸಿದ್ದರೂ ಸಹ, ಈ ಬಾರಿ ತಪ್ಪದೇ ಮೊದಲ ದಿನದಂದೇ ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಲಸಿಕೆ ಹಾಕಿಸಬೇಕು ಜೂ.28ರಂದು ಲಸಿಕಾ ಕೇಂದ್ರಗಳಲ್ಲಿ ಲಸಿಕೆ ನೀಡಲಾಗುತ್ತದೆ. ಬಳಿಕ ಜುಲೈ 1ರ ವರೆಗೆ ಮೂರು ದಿನಗಳ ಕಾಲ ಆರೋಗ್ಯ ಕಾರ್ಯಕರ್ತರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಪ್ರತಿ ಮನೆಗೆ ಭೇಟಿ ನೀಡಲಿದ್ದಾರೆ. ಬೂತ್‌ಗಳಲ್ಲಿ ಲಸಿಕೆ ಪಡೆಯದ ಮಕ್ಕಳನ್ನು ಪತ್ತೆ ಹಚ್ಚಿ ಲಸಿಕೆ ನೀಡಲಾಗುವುದು. ಈ ಅಭಿಯಾನಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಶಿವಲೀಲಾ ಬುಟಾಳಿ. ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್. ಉಪಾಧ್ಯಕ್ಷ ಭುವನೇಶ್ವರಿ ಯಂಕಂಚಿ. ಪುರಸಭೆ ಸದಸ್ಯರಾದ ರಾಜು ಗುಡೋಡಗಿ. ಸೈಯ್ಯದಅಮೀನ್ ಗದ್ಯಾಳ. ಮಲ್ಲಿಕಾರ್ಜುನ ಬುಟಾಳಿ. ವಿಲಿನರಾಜ್ ಯಳಮಲ್ಲೆ. ಕಲ್ಲೇಶ್ ಮಡ್ಡಿ. ಮಲ್ಲೇಶ ಹುದ್ದಾರ. ನಾಮನಿರ್ದೇಶಿತ ಸದಸ್ಯ ಶಶಿಕಾಂತ ಹುಲಕುಂದ. ರೋಟರಿ ಸಂಸ್ಥೆಯ ಅಧ್ಯಕ್ಷ ಸಚಿನ್ ದೇಸಾಯಿ. ಅರುಣ ಯಲಗುದ್ರಿ. ಶೇಖರ ಕೋಲಾರ. ಅಧಿಕಾರಿಗಳಾದ ಸಿಪಿಐ ಸಂತೋಷ ಹಳ್ಳೂರ. ಕ್ಷೇತ್ರ ಶಿಕ್ಷಣಾಧಿಕಾರಿ ಎಂ ಆರ್ ಮುಂಜೆ. ಪುರಸಭೆ ಮುಖ್ಯಾಧಿಕಾರಿ ಅಶೋಕ ಗುಡಿಮನಿ. ನೌಕರರ ಸಂಘದ ತಾಲೂಕು ಅಧ್ಯಕ್ಷ ರಾಮಗೌಡ ಪಾಟೀಲ. ವೈದ್ಯರಾದ ಡಾ. ಚಿದಾನಂದ ಮೇತ್ರಿ. ಮುಖಂಡರಾದ ರಾಮಣ್ಣ ಧರಿಗೌಡ. ರವಿ ಭಡಕಂಬಿ. ಮಲ್ಲು ಕುಲ್ಲೋಳ್ಳಿ. ಮಂಜು ನೂಲಿ. ಮುತ್ತು ಮೋಕಾಶಿ. ಶ್ರೀನಿವಾಸ ಪಟ್ಟಣ ಸೇರಿದಂತೆ ಆಸ್ಪತ್ರೆಯ ವೈದ್ಯರು. ಸಿಬ್ಬಂದಿ ವರ್ಗದವರು. ಗಣ್ಯರು ಹಾಗೂ ಪಾಲಕರು ಉಪಸ್ಥಿತರಿದ್ದರು.

## ಹೂಡಿಕೆದಾರರ ರಕ್ಷಣೆಗೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು: ಡಾ. ಸಂಜಯ ಹೊಸಮಠ

**ಬೆಳಗಾವಿ ವಾರ್ತೆ ಗೋಕಾಕ:** ಇತ್ತೀಚಿನ ದಿನಗಳಲ್ಲಿ ಕಡಿಮೆ ಅವಧಿಯಲ್ಲಿ ಹೆಚ್ಚಿನ ಹಣ ಸಂಪಾದಿಸುವ ಪ್ರವೃತ್ತಿ ಸಮಾಜದಲ್ಲಿ ಹೆಚ್ಚಾಗುತ್ತಿದ್ದು, ಇದರ ಪರಿಣಾಮವಾಗಿ ವಿವಿಧ ಹಣಕಾಸು ಸಂಸ್ಥೆಗಳ ಮೂಲಕ ಸಾರ್ವಜನಿಕರ ಆರ್ಥಿಕ ಶೋಷಣೆ ನಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಈ ವಿಷಯದಲ್ಲಿ ಹೂಡಿಕೆದಾರರ ರಕ್ಷಣೆಗೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಸ್ಥೆಗಳ ಮಹಾಮಂಡಳದ ನಿರ್ದೇಶಕ ಡಾ. ಸಂಜಯ ಹೊಸಮಠ ಸಲಹೆ ನೀಡಿದ್ದಾರೆ.

ವಿಶೇಷವಾಗಿ ಸಾಮಾನ್ಯ ಜನರ ಆರ್ಥಿಕ ಬೆನ್ನೆಲುಬಾಗಿರುವ ಸಹಕಾರ ಕ್ಷೇತ್ರದಲ್ಲಿ ನಡೆಯುತ್ತಿರುವ ಕೆಲವು ಆರ್ಥಿಕ ಅಕ್ರಮಗಳು ಸಾವಿರಾರು ಹೂಡಿಕೆದಾರರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರುತ್ತಿವೆ ಅಂಚೆ ಇಲಾಖೆ ಹಾಗೂ ಭಾರತೀಯ ರಿಸರ್ವ್ ಬ್ಯಾಂಕ್ ನಿಯಮಾವಳಿಗಳ ಅಡಿಯಲ್ಲಿ ಕಾರ್ಯನಿರ್ವಹಿಸುವ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಹೂಡಿಕೆಗಳಿಗೆ ಹೆಚ್ಚಿನ ಭದ್ರತೆ ಇದ್ದರೂ, ಕಡಿಮೆ ಬಡ್ಡಿದರದ ಕಾರಣ ಹೆಚ್ಚಿನ ಆದಾಯದ ನಿರೀಕ್ಷೆಯಲ್ಲಿ ಅನೇಕರು ವಿವಿಧ ಸಹಕಾರಿ ಪತ್ತಿನ ಸಂಸ್ಥೆಗಳು ಮತ್ತು ಅರ್ಬನ್ ಕೋ-ಆಪರೇಟಿವ್ ಸೊಸೈಟಿಗಳಲ್ಲಿ ಹಣ ಹೂಡಿಕೆ ಮಾಡುತ್ತಿದ್ದಾರೆ. ಆದರೆ ಕೆಲವು ಸಂಸ್ಥೆಗಳಲ್ಲಿ ಕಂಡುಬಂದಿರುವ ದುರಾಡಳಿತ ಮತ್ತು ಆರ್ಥಿಕ ಅಕ್ರಮಗಳಿಂದ ಹೂಡಿಕೆದಾರರು ಭಾರೀ ನಷ್ಟ ಅನುಭವಿಸುತ್ತಿದ್ದಾರೆ.



ಸಹಕಾರಿ ಸಂಸ್ಥೆಗಳಲ್ಲಿ ಪ್ರತಿ ಆರ್ಥಿಕ ವರ್ಷದ ಅಂತ್ಯದಲ್ಲಿ ಕಡ್ಡಾಯವಾಗಿ ಲೆಕ್ಕಪರಿಶೋಧನೆ ನಡೆಸಿ, ಅದರ ವರದಿಯನ್ನು ಸದಸ್ಯರ ಮುಂದೆ ಮಂಡಿಸಬೇಕಾಗಿದೆ. ಆದರೆ ಕೆಲವು ಕಡೆಗಳಲ್ಲಿ ಬಾಕಿ ಮೊತ್ತಗಳನ್ನು ಆದಾಯವೆಂದು ತೋರಿಸಿ ಕೃತಕ ಲಾಭ ಪ್ರದರ್ಶಿಸುವ ಆರೋಪಗಳು ಕೇಳಿಬರುತ್ತಿವೆ. ಇಂತಹ ಕ್ರಮಗಳಿಂದ ಸದಸ್ಯರು ಮತ್ತು ಹೂಡಿಕೆದಾರರು ತಪ್ಪು ಮಾಹಿತಿಗೆ ಒಳಗಾಗುವ ಸಾಧ್ಯತೆ ಹೆಚ್ಚಾಗಿದೆ.

ಸಹಕಾರ ಕ್ಷೇತ್ರದಲ್ಲಿ ಪಾರದರ್ಶಕತೆ ಮತ್ತು ಉತ್ತರದಾಯಿತ್ವವನ್ನು ಹೆಚ್ಚಿಸಲು ರಾಜ್ಯದ ಎಲ್ಲಾ ಸಹಕಾರಿ ಸಂಸ್ಥೆಗಳನ್ನು ಏಕೀಕೃತ "ಕಾಮನ್ ಅಪ್ಲಿಕೇಶನ್ ಸಾಫ್ಟ್‌ವೇರ್" ವ್ಯವಸ್ಥೆಗೆ ಸಂಪರ್ಕಿಸುವ ಅಗತ್ಯವಿದೆ. ಇದರಿಂದ ಹಣಕಾಸಿನ ವ್ಯವಹಾರಗಳ ಮೇಲೆ ನಿರಂತರ ನಿಗಾ ಇಡಲು ಸಾಧ್ಯವಾಗುವುದರ ಜೊತೆಗೆ, ನಿಯಮಬಾಹಿರ ಸಾಲ ವಿತರಣೆ ಹಾಗೂ ಇತರ ಆರ್ಥಿಕ ಅಕ್ರಮಗಳನ್ನು ತಡೆಗಟ್ಟಲು ನೆರವಾಗಲಿದೆ ಎಂದು ಡಾ. ಹೊಸಮಠ ಹೇಳಿದ್ದಾರೆ.

## ಹಳ್ಳೂರದಲ್ಲಿ ಜನಪದ ಕಲಾ ಮೇಳ ಕಾರ್ಯಕ್ರಮ ಉದ್ಘಾಟನೆ

**ಬೆಳಗಾವಿ ವಾರ್ತೆ ಮೂಡಲಗಿ :** ನಮ್ಮ ಗ್ರಾಮೀಣ ಭಾಗದ ಹಳ್ಳಿಗಳಲ್ಲಿ ಇವತ್ತಿಗೂ ಜನಪದ ಕಲೆಗಳು ಜೀವಂತವಾಗಿವೆ. ಮೂಲ ಜಾನಪದ ಕಲಾವಿದರಿಗೆ ಜಿಲ್ಲಾ ಮತ್ತು ರಾಜ್ಯ ಮಟ್ಟದ ವೇದಿಕೆಗಳಲ್ಲಿ ಅವಕಾಶ ಕಲ್ಪಿಸಬೇಕಾಗಿದೆ ಎಂದು ಡೊಳ್ಳಿನ ಪದಗಳ ಹಿರಿಯ ಸಾಹಿತಿಗಳಾದ ಶ್ರೀ ಸತ್ಯಪ್ಪ ಮಹಾರಾಜರು ಹೇಳಿದರು.

ಅವರು ಮೂಡಲಗಿ ತಾಲೂಕಿನ ಹಳ್ಳೂರ ಗ್ರಾಮದ ಶ್ರೀ ಸೀಮಿವ್ವಾದೇವಿ ಅಭಿವೃದ್ಧಿ ಸೇವಾ ಸಂಘದ ಪಲ್ಲಕ್ಕಿ ಭವನದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಶ್ರೀ ಇಟ್ಟಪ್ಪ ದೇವರ ಅಭಿವೃದ್ಧಿ ಸೇವಾ ಸಂಘ ಹಳ್ಳೂರ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಜನಪದ ಕಲಾ ಮೇಳ ಕಾರ್ಯಕ್ರಮವನ್ನು ಡೊಳ್ಳು ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿ ನಮ್ಮ ಹಿರಿಯರು ವಂಶ ಪರಂಪರೆಕವಾಗಿ ಜನಪದ ಕಲೆಗಳನ್ನು ಪೀಳಿಗೆಯಿಂದ ಪೀಳಿಗೆಗೆ ಉಳಿಸಿಕೊಂಡು ಬರುತ್ತಿದ್ದಾರೆ ಡೊಳ್ಳಿನ ಪದಗಳು, ಭಜನೆ ಕೀರ್ತನ ನೃತ್ಯ ಪ್ರಕಾರಗಳು, ಹಂತಿ ಪದಗಳು, ಸಿದ್ದಿ ಕುಣಿತ, ಡೊಳ್ಳು ಕುಣಿತ, ಹೋಳಿ ಹುಣ್ಣಿಮೆಯ ಪದಗಳು, ಶಾವರಕಿ ಪದಗಳು, ಗೀಗಿ ಪದಗಳು, ಭಜನಾ ಪದಗಳು ಪ್ರತಿನಿತ್ಯ ಮಾಡುತ್ತಾ ಬಂದಿದ್ದಾರೆ.




ಎಲೆ ಮರಿ ಕಾಯಿಯಂತೆ ಕಲಾ ಸೇವೆ ಮಾಡುತ್ತಿರುವ ನಮ್ಮ ಕಲಾವಿದರಿಗೆ ಸಹಾಯಧನ ಮತ್ತು ಪ್ರೋತ್ಸಾಹ ನೀಡಬೇಕೆಂದು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು.

ಯುವ ಸಂಘಟಕ ಮತ್ತು ಕಾರ್ಯಕ್ರಮದ ರೂವಾರಿ ಸಿದ್ದಣ್ಣ ದುರದುಂಡಿ ಮಾತನಾಡಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಮ್ಮ ಭಾಗದ ಜನಪ್ರಿಯ ಶಾಸಕರು ಹಾಗೂ ಬೆಮುಲ್ ಅಧ್ಯಕ್ಷರಾದ ಬಾಲಚಂದ್ರ ಅಣ್ಣಾ ಜಾರಕಿಹೊಳಿಯವರ ಸಹಕಾರದಿಂದ ಜಾನಪದ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮಾಡುತ್ತಿದ್ದೇವೆ. ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸಿದ ಎಲ್ಲರಿಗೂ ನಮ್ಮ ಕಮಿಟಿಯ ಪರವಾಗಿ ಧನ್ಯವಾದಗಳು ಸಲ್ಲಿಸಿ, ನಶಿಸುತ್ತಿರುವ ಮೂಲ ಜಾನಪದ ಕಲೆಗಳನ್ನು ಉಳಿಸಲು ಸಾಂಸ್ಕೃತಿಕ ಚಟುವಟಿಕೆಗಳನ್ನು ನಿರಂತರವಾಗಿ ಮುಂದುವರಿಯುತ್ತವೆ ಎಂದು ಹೇಳಿದರು.

ಕಾರ್ಯಕ್ರಮದದಲ್ಲಿ ಶ್ರೀ ಸೀಮೆವ್ವಾದೇವಿ ಅಭಿವೃದ್ಧಿ ಸೇವಾ ಸಂಘದ ಅಧ್ಯಕ್ಷ ಬಸಪ್ಪ ಬೆಳಗಲಿ, ಉಪಾಧ್ಯಕ್ಷ ಮಲ್ಲಪ್ಪ ಕುಲಗೋಡ, ಬಸಪ್ಪ ದುರದುಂಡಿ, ಶ್ರೀಕಾಂತ ದುರದುಂಡಿ, ಲಕ್ಷ್ಮಣ ಪೂಜೇರಿ, ಶ್ರೀ ಮಾಲಕ್ಷ್ಮಿದೇವಿ ಕುಣಿತ ಕಲಾ ಸಂಘದ ಅಧ್ಯಕ್ಷ ಸದಾಶಿವ ದುರದುಂಡಿ, ಲಕ್ಕಪ್ಪ ದುರದುಂಡಿ, ಭೀಮಪ್ಪ ತೇರದಾಳ, ಅಲ್ಲಪ್ಪ ಬೆಳಗಲಿ, ಶಂಕರ ಕುಲಗೋಡ, ಮಹಾದೇವ ದುರದುಂಡಿ, ಸಂಗಪ್ಪ ಸುಣಧೋಳಿ, ಸಿದ್ದಯ್ಯ ತಮದಡ್ಡಿ, ಮಲ್ಲಪ್ಪ ಬೆಳಗಲಿ, ವಿಠ್ಠಲ ದುರದುಂಡಿ, ಲಕ್ಕಪ್ಪ ಬೆಳಗಲಿ, ಹೊಳೆಪ್ಪ ಕೌಜಲಗಿ, ಲಕ್ಷ್ಮಣ ಕುಲಗೋಡ ಹಾಗೂ ಗುರು ಹಿರಿಯರು ಕಮಿಟಿಯ ಸರ್ವ ಸದಸ್ಯರು ಮುಂತಾದವರು ಉಪಸ್ಥಿತರಿದ್ದರು. ಜಿಲ್ಲಾ ಯುವ ಪ್ರಶಸ್ತಿ ವಿಜೇತರಾದ ಮಾಯಕ್ಕ ದುರದುಂಡಿ ನಿರೂಪಿಸಿದರು. ಸದಾಶಿವ ದುರದುಂಡಿ ಮತ್ತು ರಮೇಶ ದುರದುಂಡಿ ಸ್ವಾಗತಿಸಿ ವಂದಿಸಿದರು.

## ಸಮಾಜ ಕಲ್ಯಾಣ : ಶಿಷ್ಯವೇತನಕ್ಕೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಪ್ರಸಕ್ತ ಸಾಲಿನ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶಿಷ್ಯವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನ ಜನವರಿ 31, 2027 ಆದರೆ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸುವ ಕೊನೆ ದಿನ ಆಗಸ್ಟ 31 ಆಗಿದೆ. ಅರ್ಜಿಯನ್ನು ಇಲಾಖೆಯ ವೆಬ್‌ಸೈಟ್ http://ssp.postmatric.karnataka.gov.in/homepage.aspx ನಲ್ಲಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಎಸ್.ಎ.ಟಿ.ಎಸ್, ಎಸ್.ಎಸ್.ಪಿ ನಂಬರ, ವಿದ್ಯಾರ್ಥಿಯ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ ಕಾರ್ಡ, ಬ್ಯಾಂಕ್ ಪಾಸ್‌ಬುಕ್, ಮೊ.ನಂಬರ ಬೇಕಾಗುತ್ತದೆ ಎಂದು ಬಾಗಲಕೋಟೆ ತಾಲೂಕಾ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವಲಗುಂದದಲ್ಲಿ ಮೊಹರಂ ಆಚರಣೆ



**ಬೆಳಗಾವಿ ವಾರ್ತೆ ನವಲಗುಂದ:** ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಹೆಸರಾಗಿರುವ ಐತಿಹಾಸಿಕ ಮೊಹರಂ ಅಲಾಯಿ ಹಬ್ಬವು ಶ್ರದ್ಧಾ ಭಕ್ತಿಯಿಂದ ಅದ್ಧೂರಿಯಾಗಿ ಜರುಗಿತು.

ಪಟ್ಟಣದಲ್ಲಿ ಕೋಮು ಸೌಹಾರ್ದತೆಗೆ ಪ್ರಮುಖ ಕೇಂದ್ರವಾಗಿರುವ ಪ್ರಸಿದ್ಧ ಅಜಾತ ನಾಗಲಿಂಗಸ್ವಾಮಿ ಮಠದಲ್ಲಿ ಮೊಹರಂ ಹಬ್ಬದ ಅಂಗವಾಗಿ ಪವಿತ್ರ ಪಂಜಾಗಳನ್ನು ಪ್ರತಿಷ್ಠಾಪಿಸಿ, ಪೂಜಿಸುವ ಪರಂಪರೆ ನಾಗಲಿಂಗಸ್ವಾಮಿಯವರ ಕಾಲದಿಂದಲೂ ಅತ್ಯಂತ ಶ್ರದ್ಧೆಯಿಂದ ನಡೆದುಕೊಂಡು ಬಂದಿದೆ. ಮಠದ ಆವರಣದಲ್ಲಿ ಹಿಂದೂ ಮತ್ತು ಮುಸ್ಲಿಂ ಬಾಂಧವರು ಪ್ರಾರ್ಥನೆ ಸಲ್ಲಿಸುವುದು ಇಲ್ಲಿನ ಭಾವಕ್ಯತೆಗೆ ಸಾಕ್ಷಿಯಾಗಿದೆ.

ಪಟ್ಟಣದ ಕಳ್ಳಿಮಠ ಓಣಿ, ಜಟಕಾದವರ ಓಣಿ, ನಾಶಿಪುಡಿ ಓಣಿ, ಜಮಖಾನ ಓಣಿ, ಗುಡ್ಡದಕೇರಿ ಓಣಿ, ಹೊರಗಿನಟಕ್ಕೆ ಸೇರಿದಂತೆ ವಿವಿಧ ಪ್ರದೇಶಗಳ ಮಸೀದಿ ಹಾಗೂ ಚೌಕಿಗಳಲ್ಲಿ ಐದು ದಿನಗಳ ಕಾಲ ಪ್ರತಿಷ್ಠಾಪಿಸಲಾಗಿದ್ದ ಪಂಜಾಗಳನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಸೂರ್ಯಾಸ್ತದ ನಂತರ ಈ ಎಲ್ಲಾ ಪಂಜಾಗಳು ಚವಡಿ ಬಯಲಿಗೆ ಬಂದು ತಲುಪಿದಾಗ ಭಕ್ತ ಸಾಗರವೇ ಹರಿದುಬಂದಿತ್ತು.

ಹಬ್ಬದ ಹಿನ್ನೆಲೆಯಲ್ಲಿ ಯುವಕರು ಹೆಜ್ಜೆ ಮೇಳವನ್ನು ಹಾಕಿದರು, ಹರಕೆ ಹೊತ್ತ ಭಕ್ತರು ವಿಶಿಷ್ಟವಾಗಿ ಹುಲಿ ವೇಷ ಧರಿಸಿ ಪಂಜಾಗಳ ಮುಂದೆ ಕುಣಿದು ಭಕ್ತಿ ಸಮರ್ಪಿಸಿದರು. ಕರಬಲಾದ ಇಮಾಮ್ ಹಸನ್ ಹಾಗೂ ಇಮಾಮ್ ಹುಸೇನ್ ಅವರ ನೆನಪಿನಲ್ಲಿ ನೂರಾರು ಭಕ್ತರು ಕಠಿಣ ಉಪವಾಸ ವ್ರತ ಆಚರಿಸಿ ಕರಬಲಾದ ಹುತಾತ್ಮರ ತ್ಯಾಗವನ್ನು ಸ್ಮರಿಸಿದರು.

ಪ್ರತಿ ವರ್ಷದಂತೆ ಈ ವರ್ಷವು ಸಹ ಅಂಜುಮನ್ ಸಂಸ್ಥೆಯ ಮಾಜಿ ಅಧ್ಯಕ್ಷ ಅಬ್ಬಾಸಲಿ ದೇವರಿಡು ಅವರ ಮನೆತನದಿಂದ ಶರಬತ್ ಹಂಚಿದರು, ನವಲಗುಂದ ಪೊಲೀಸ್ ಠಾಣೆಯ ಸಿಪಿಐ ರವಿಕುಮಾರ ಕಪ್ಪತ್ತನವರ ಹಾಗೂ ಪಿಎಸ್ಐ ಜನಾರ್ಧನ ಭಟ್ರಳ್ಳಿ ಅವರ ನೇತೃತ್ವದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪಟ್ಟಣದಾದ್ಯಂತ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು.

# ಕೇವಲ ಅಂಕ ಪ್ರಣೀತ ಅಧ್ಯಯನ ವ್ಯರ್ಥ



**ಬೆಳಗಾವಿ ವಾರ್ತೆ ಅಮ್ಮಿನಬಾವಿ:** ವಿದ್ಯಾರ್ಥಿಗಳು ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕಗಳಿಕೆಯ ಹಂಬಲದಿಂದ ವಿಷಯಗಳ ಆಳವಾದ ಜ್ಞಾನ ಸಂಪಾದನೆಗೆ ತೆರೆದುಕೊಳ್ಳದೇ ನಡೆಸುವ ಕೇವಲ ಅಂಕ ಪ್ರಣೀತ ಅಧ್ಯಯನ ವ್ಯರ್ಥಗೊಳ್ಳುತ್ತದೆ ಎಂದು ಹಿರಿಯ ಶಿಕ್ಷಣ ಚಿಂತಕ ಸುರೇಶ ಕುಲಕರ್ಣಿ ಪ್ರತಿಪಾದಿಸಿದರು.

ಅವರು ಕನ್ನಡ ಸಾಹಿತ್ಯ ಪರಿಷತ್ತು (ಕಸಾಪ) ಧಾರವಾಡ ಜಿಲ್ಲಾ ಮತ್ತು ತಾಲೂಕು ಘಟಕಗಳ 5 ದತ್ತಿ ಕಾರ್ಯಕ್ರಮಗಳ ಅಂಗವಾಗಿ ಗ್ರಾಮದ ಶ್ರೀಶಾಂತೇಶ್ವರ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ದತ್ತಿ ಉಪನ್ಯಾಸ ನೀಡಿ ಮಾತನಾಡುತ್ತಿದ್ದರು.

ನಿರ್ದಿಷ್ಟ ಚರ್ಚೆಯೊಂದಿಗೆ ಪಠ್ಯ ಪೂರಕ ಪ್ರಶ್ನೆಗಳಿಗೆ ನಿಖರ ಉತ್ತರಗಳನ್ನು ಕಂಡುಕೊಂಡಾಗ ವ್ಯಾಸಂಗದ ವಿಷಯಗಳು ನೆನಪಿನಾಳದಲ್ಲಿ ಶಾಶ್ವತವಾಗಿ ಉಳಿಯಲು ಸಾಧ್ಯವಾಗುತ್ತದೆ. ಮಾನವನ ಮೆದುಳು ಹೊಂದಿರುವ 1 ಸಾವಿರ ಕೋಟಿ ನರವ್ಯೂಹಗಳು 400 ಕಿ.ಮೀ. ವೇಗದಲ್ಲಿ ಕಾರ್ಯಮಾಡುತ್ತಿದ್ದು, ಧನಾತ್ಮಕ ಚಿಂತನೆ, ಅನ್ವೇಷಣೆ, ಅರ್ಥ ಪೂರ್ಣ ಓದು, ವಿಷಯದ ಆಸ್ವಾದನೆ ಅಧಿಕವಾದಷ್ಟೂ ಜ್ಞಾನಸಂಪಾದನೆ ವ್ಯಾಪಕಗೊಳ್ಳುತ್ತದೆ ಎಂದೂ ಸುರೇಶ ಕುಲಕರ್ಣಿ ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಧಾರವಾಡ ಜಿಲ್ಲಾ ಕಸಾಪ ಅಧ್ಯಕ್ಷ ಡಾ.ಲಿಂಗರಾಜ ಅಂಗಡಿ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಋಣಾತ್ಮಕ ಭಾವನೆಗಳ ಹವ್ಯಾಸಗಳತ್ತ ಇಣಿಕಿಹಾಕದೇ ಮೌಲ್ಯಾಧಾರಿತ ಬದುಕನ್ನು ರೂಢಿಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಯಾಗಿದ್ದ ಹವ್ಯಾಸೀ ಪತ್ರಕರ್ತ ಗುರುಮೂರ್ತಿ ಯರಗಂಬಳಿಮಠ ಮಾತನಾಡಿ, ವಿದ್ಯಾರ್ಥಿಗಳು ಪುಸ್ತಕ ಪ್ರೀತಿಯನ್ನು ಬೆಳೆಸಿಕೊಂಡು ನಿರಂತರ ಹೊಸ ಓದಿನೊಂದಿಗೆ ಸಂಪಾದಿಸುವ ಜ್ಞಾನದ ನೆಲೆಯಲ್ಲಿ ಭಾರತ ಬಯಸುವ ಉತ್ಕೃಷ್ಟ ಮಾನವ ಸಂಪನ್ಮೂಲವಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದರು.

ಇನ್ನೋರ್ವ ಅತಿಥಿ ಶಿಕ್ಷಕ ಮುಖಂಡ ಗುರು ತಿಗಡಿ ಮಾತನಾಡಿ, ನಮ್ಮ ಗ್ರಾಮೀಣ ಪ್ರತಿಭೆಗಳು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಉನ್ನತ ಸ್ಥಾನಗಳನ್ನು ಪಡೆಯುವಂತಹ ವಿಶೇಷ ಜ್ಞಾನ ಸಂಪಾದನೆಗೆ ತೊಡಗಿಕೊಳ್ಳಬೇಕು ಎಂದರು.

ಪ್ರೌಢ ಶಾಲಾ ಆಡಳಿತ ಮಂಡಳಿಯ ಉಪಾಧ್ಯಕ್ಷ ಸುನೀಲ ಗುಡಿ ಮಾತನಾಡಿ, ವಿದ್ಯಾರ್ಥಿಗಳು ಎಲ್ಲಾ ವಿಷಯಗಳನ್ನು ಕಷ್ಟ ಪಟ್ಟು ಕಲಿಯದೇ ಇಷ್ಟಪಟ್ಟು ಕಲಿಯಲು ರೂಢಿಸಿಕೊಂಡಾಗ ಮೇಧಾವಿ ಜಾಣ್ಮೆ ಬೆಳೆದು ಪ್ರಶಂಸೆಗೆ ಪಾತ್ರರಾಗುತ್ತಾರೆ ಎಂದರು.

ಪ್ರೌಢ ಶಾಲೆಯ ಮುಖ್ಯಾಧ್ಯಾಪಕ ಎನ್.ಬಿ.ಅಮರಗೋಳ ಅಧ್ಯಕ್ಷತೆವಹಿಸಿದ್ದರು. ಕ.ಸಾ.ಪ. ಜಿಲ್ಲಾ ಕಾರ್ಯದರ್ಶಿ ಡಾ.ಜಿನದತ್ತ ಹಡಗಲಿ ಮತ್ತು ಕ.ಸಾ.ಪ. ತಾಲೂಕಾಧ್ಯಕ್ಷ ಮಹಾಂತೇಶ ನರೇಗಲ್ಲ ಮಾತನಾಡಿದರು. ಕಲಾವಿದೆ ಪ್ರಮಿಳಾ ಜಕ್ಕಣ್ಣವರ ಕನ್ನಡ ಗೀತಗಾಯನ ಪ್ರಸ್ತುತಪಡಿಸಿದರು. ಶಿಕ್ಷಕ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಜಿತಕುಮಾರ ದೇಸಾಯಿ, ಎಂ.ಜಿ.ಸುಬೇದಾರ, ಉಮಾ ಬಾಗಲಕೋಟ ಇದ್ದರು. ಶಿಕ್ಷಕಿ ಲಲಿತಾ ವೈ.ಎಂ. ನಿರೂಪಿಸಿದರು. ಜಿ.ಎಫ್. ಶಿವಬಸನಗೌಡ್ರ ವಂದಿಸಿದರು.

**ಪುರಸ್ಕಾರ ಪ್ರದಾನ :** ಎಸ್. ಎಸ್.ವಿದ್ವಾನ್ ಮತ್ತು ಎಸ್.ಗುರುಕುಮಾರ ದತ್ತಿ, ಮಲ್ಲಮ್ಮ ಮೂಲಿಮನಿ ದತ್ತಿ, ದಿ. ಕಾಮಾಕ್ಷಮ್ಮ ಚೆನ್ನವೀರಸ್ವಾಮಿ ಚಿಕ್ಕಮಠ ದತ್ತಿ, ದಿ. ವೇದಮೂರ್ತಿ ಚೆನ್ನವೀರಸ್ವಾಮಿ ಚಿಕ್ಕಮಠ ದತ್ತಿ, ದಿ. ಶಾಂತಾ ಚೆನ್ನಬಸಪ್ಪ ಸುಣಧೋಳಿ ದತ್ತಿ ಅಂಗವಾಗಿ ವಿದ್ಯಾರ್ಥಿನಿಯರಾದ ವಿನೋದಾ ಕಂಬಳಿ, ಅಕ್ಷತಾ ರುದ್ರಪ್ಪನವರ ಹಾಗೂ ಲಕ್ಷ್ಮಿ ಕರಡಿಗುಡ್ಡ ಅವರಿಗೆ ಕ.ಸಾ.ಪ.ದಿಂದ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಾಯಿತು.

## ಡಿ.ಇ.ಎಲ್.ಇಡಿ ಕೋರ್ಸಿನ ಸರಕಾರಿ ಕೋಟಾದಡಿ ಸೀಟು ಹಂಚಿಕೆಯ ಪಟ್ಟಿ ಪ್ರಕಟ

**ಬೆಳಗಾವಿ ವಾರ್ತೆ ಗದಗ:** 2026-27 ನೇ ಸಾಲಿನ ಡಿ.ಇ.ಎಲ್.ಇಡಿ ಕೋರ್ಸಿನ ಸರಕಾರಿ ಕೋಟಾದಡಿ ಸೀಟು ಹಂಚಿಕೆಯ ಪಟ್ಟಿಯನ್ನು ಡಯಟ್ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಸರಕಾರಿ ಕೋಟಾದಡಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಗದಗ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ತಮಗೆ ಹಂಚಿಕೆಯಾಗಿರುವ ಶಿಕ್ಷಣ ಸಂಸ್ಥೆಯನ್ನು ಖಚಿತಪಡಿಸಿಕೊಳ್ಳಬೇಕು. ನಿಗದಿಪಡಿಸಲಾಗದ ದಾಖಲಾತಿ ಶುಲ್ಕವನ್ನು ಯಾವುದೇ ರಾಷ್ಟ್ರೀಕೃತ ಬ್ಯಾಂಕಿನ ಶಾಖೆಯಲ್ಲಿ ಡಿಡಿಯನ್ನು ದಿನಾಂಕ:04-07-2026 ರೊಳಗಾಗಿ ಪಡೆದು ಮೂಲ ದಾಖಲೆಗಳೊಂದಿಗೆ ಡಯಟ್ ಗದಗ ಕೇಂದ್ರಕ್ಕೆ ಸಲ್ಲಿಸಿ ದಾಖಲಾತಿ ಪತ್ರವನ್ನು ಪಡೆದುಕೊಳ್ಳಬೇಕು. ಹಾಗೂ ಸಂಬಂಧಿಸಿದ ಶಿಕ್ಷಣ ಸಂಸ್ಥೆಯಲ್ಲಿ ದಿನಾಂಕ:06-07-2026 ರೊಳಗಾಗಿ ದಾಖಲಾತಿಯನ್ನು ಪಡೆದುಕೊಳ್ಳಬೇಕು. ಅಂತಿಮ ದಿನಾಂಕದ ನಂತರ ದಾಖಲಾತಿಗೆ ಯಾವುದೇ ಅವಕಾಶ ವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ : ಶಾಲಾ ಶಿಕ್ಷಣ ವೆಬ್‌ಸೈಟ್ ನಲ್ಲಿ ಸಂಪರ್ಕಿಸಬಹುದಾಗಿದೆ.

## ಶುದ್ಧ ಕುಡಿಯುವ ನೀರಿನ ಘಟಕ ಅಳವಡಿಕೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ತಾಲೂಕಿನ ಎಂಕೆಹುಬ್ಬಳ್ಳಿ ಶ್ರೀ ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ಆವರಣದಲ್ಲಿ ಕಾರ್ಮಿಕರ ಹಾಗೂ ಅಲ್ಲಿ ಆಗಮಿಸುವ ರೈತರ ಆರೋಗ್ಯದ ಹಿತದೃಷ್ಟಿಯಿಂದ ವಿಪ ಸದಸ್ಯ ಹಾಗೂ ಕಾರ್ಖಾನೆ ಅಧ್ಯಕ್ಷ ಚನ್ನರಾಜ ಹಟ್ಟಿಹೊಳಿ ತಮ್ಮ ಅನುದಾನದಡಿಯಲ್ಲಿ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಿ ಉದ್ಘಾಟಿಸಿದರು. ನಂತರ ಅವರು ಮಾತನಾಡಿ ಸರ್ಕಾರದ ಅನುದಾನಡಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಅಳವಡಿಸಲಾಗಿದೆ. ಕಾರ್ಮಿಕರು-ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಇದೇ ವೇಳೆ ಕಾರ್ಮಿಕರೊಂದಿಗೆ ಸಭೆ ನಡೆಸಿ ಅವರ ಕುಂದುಕೊರತೆ ಆಲಿಸಿ ಅವರ ಮನವಿಯನ್ನು ಸ್ವೀಕರಿಸಿ ನಿಮ್ಮ ಬೇಡಿಕೆಗಳನ್ನು ಇಡೇರಿಸಲಾಗುವುದೆಂದರು. ಉಪಾಧ್ಯಕ್ಷ ಶಿವನಗೌಡ ಪಾಟೀಲ, ಸರ್ವ ನಿರ್ದೇಶಕ ಮಂಡಳಿ, ಎಂ ಡಿ ಮೋಹನ ಹಿರೇಮಠ, ತಾಪಂ ಮಾಜಿ ಸದಸ್ಯ ಮುದಕಪ್ಪ ಮರಡಿ, ಆಯಾ ವಿಭಾಗದ ಮುಖ್ಯಸ್ಥರು, ಇಂಜನೀಯರ, ಕಾರ್ಮಿಕರು, ಕಾರ್ಖಾನೆ, ಕಛೇರಿ ಸರ್ವ ಸಿಬ್ಬಂದಿ ಸೇರಿದಂತೆ ಇತರರಿದ್ದರು.

# ಎಸ್‌ಸಿ-ಎಸ್‌ಟಿ ಹಬ್ ಯೋಜನೆಗಳ ಸದುಪಯೋಗವಾಗಲಿ



**ಬೆಳಗಾವಿ ವಾರ್ತೆ ಅಥಣಿ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕರು ಉದ್ಯೋಗ ಪಡೆಯಲು ಹಾತೊರೆಯದೇ ಉದ್ಯೋಗ ಸೃಷ್ಟಿಸುವವರಾಗಬೇಕು. ತಳ ಸಮುದಾಯಗಳು ಸ್ವಾವಲಂಬಿ ಬದುಕು ಕಟ್ಟಿಕೊಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕಾದರೆ ಉದ್ಯಮಶೀಲತೆಯನ್ನು ಅಳವಡಿಸಿಕೊಳ್ಳುವುದು ಅಗತ್ಯ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸಲಹೆ ನೀಡಿದರು.

ಪಟ್ಟಣದ ಆರ್.ಎಚ್. ಕುಲಕರ್ಣಿ ಭವನದಲ್ಲಿ ಎಸ್‌ಸಿ-ಎಸ್‌ಟಿ ಹಬ್, ಎಂಎಸ್ ಎಂಇ ಹಾಗೂ ಅಖಿಲ ಕರ್ನಾಟಕ ಚರ್ಮಕಾರ ಸಮಾಜ ಮಹಾ ಒಕ್ಕೂಟ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ಉದ್ಯಮಶೀಲತಾ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರಿಗೆ ಹಾಗೂ ಸಣ್ಣ ಉದ್ಯಮಿಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಲವು ಸಾಲ ಯೋಜನೆಗಳನ್ನು ರೂಪಿಸಿದ್ದು, ಕೆಲ ಯೋಜನೆಗಳಲ್ಲಿ 10 ಕೋಟಿವರೆಗೆ ಸಾಲ ಸೌಲಭ್ಯವೂ ಲಭ್ಯವಿದೆ. ಈ ಅವಕಾಶಗಳನ್ನು ಆ ಸಮುದಾಯದ ಜನರು ಸದುಪಯೋಗಪಡಿಸಿಕೊಂಡು ತಮ್ಮ ಉದ್ಯಮಗಳನ್ನು ವಿಸ್ತರಿಸಿಕೊಳ್ಳಬೇಕು ಎಂಎಸ್ ಎಂಇ ನೋಂದಣಿ ಮಾಡಿಕೊಂಡು ಪ್ರಮಾಣಪತ್ರ ಪಡೆದವರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಪಡೆದು ಉದ್ಯಮಿಗಳಾಗಿ ಬೆಳೆಯಬೇಕು. ಎಂದು ಕರೆ ನೀಡಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರ ದೂರದೃಷ್ಟಿಯ ಫಲವಾಗಿ ಎಸ್‌ಸಿ-ಎಸ್‌ಟಿ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ ಹಾಗೂ ಆರ್ಥಿಕ ಅಭಿವೃದ್ಧಿಯ ಅನೇಕ ಅವಕಾಶಗಳು ದೊರೆತಿವೆ. ಆ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಸಮಾಜದಲ್ಲಿ ಗಟ್ಟಿಯಾದ ಸ್ಥಾನಮಾನ ಗಳಿಸಬೇಕು ಎಂದು ತಿಳಿಸಿದರು.

ಅಖಿಲ ಕರ್ನಾಟಕ ಚರ್ಮಕಾರ ಸಮಾಜ ಮಹಾ ಒಕ್ಕೂಟದ ಅಧ್ಯಕ್ಷ ಡಾ. ಅನೀಲ ಸೌದಾಗರ ಮಾತನಾಡಿ, ಸಮಗಾರ (ಚರ್ಮಕಾರ) ಸಮುದಾಯವು ಅತ್ಯಂತ ಹಿಂದುಳಿದ ಸಮುದಾಯಗಳಲ್ಲಿ ಒಂದಾಗಿದ್ದು, ಸರ್ಕಾರದ ಸೌಲಭ್ಯಗಳು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಬೇಕಾಗಿದೆ. ಸಮುದಾಯದ ಪ್ರತಿಯೊಬ್ಬರೂ ಉದ್ಯಮಿಗಳಾಗಿ ಬೆಳೆಯುವ ಉದ್ದೇಶದಿಂದ ರಾಜ್ಯ ಹಾಗೂ ರಾಷ್ಟ್ರಮಟ್ಟದ ಜಾಗೃತಿ ಕಾರ್ಯಕ್ರಮಗಳನ್ನು ತಾಲೂಕು ಮಟ್ಟಕ್ಕೆ ತರಲಾಗಿದೆ ಎಲ್ಲ ಸಮಾಜ ಬಾಂಧವರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಬೆಳಗಾವಿ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಪ್ರಶಾಂತ ಗೋಡಕೆ ಮಾತನಾಡಿ, ಉದ್ಯಮಶೀಲತೆಯಲ್ಲಿ ಯಶಸ್ಸು ಸಾಧಿಸಲು ಎಂಎಸ್‌ಎಂಇ ಪ್ರಮಾಣಪತ್ರ ಅತ್ಯಗತ್ಯವಾಗಿದೆ. ಇದರ ಮೂಲಕ ವಿವಿಧ ಯೋಜನೆಗಳು, ಸಬ್ಸಿಡಿಗಳು ಹಾಗೂ ಸಾಲ ಸೌಲಭ್ಯಗಳನ್ನು ಪಡೆಯಬಹುದು. ಬ್ಯಾಂಕುಗಳೊಂದಿಗೆ ಉತ್ತಮ ವ್ಯವಹಾರಿಕ ಸಂಬಂಧ ಹೊಂದಿ, ಸಾಲವನ್ನು ಸಮಯಕ್ಕೆ ಸರಿಯಾಗಿ ಮರುಪಾವತಿಸುವ ಮೂಲಕ ಹೆಚ್ಚಿನ ಆರ್ಥಿಕ ನೆರವು ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಸ್ವಸಹಾಯ ಸಂಘಗಳಿಗೆ ?20 ಲಕ್ಷದವರೆಗೆ ಸಾಲ ಸೌಲಭ್ಯ ಲಭ್ಯವಿದ್ದು, ಆತ್ಮನಿರ್ಭರ ಭಾರತ ಸೇರಿದಂತೆ ವಿವಿಧ ಯೋಜನೆಗಳ ಪ್ರಯೋಜನವನ್ನು ಮಹಿಳೆಯರು ಹಾಗೂ ಸಣ್ಣ ಉದ್ಯಮಿಗಳು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಎಸ್‌ಸಿ-ಎಸ್‌ಟಿ ಹಬ್ ಯೋಜನೆಗಳ ಕುರಿತು ಮಾಹಿತಿ ನೀಡಲಾಗಿದ್ದು, ಉದ್ಯಮ ಆರಂಭಿಸಲು ಅಗತ್ಯವಿರುವ ನೋಂದಣಿ, ಪ್ರಮಾಣ ಪತ್ರಗಳು ಹಾಗೂ ಸರ್ಕಾರದ ವಿವಿಧ ಯೋಜನೆಗಳ ಬಗ್ಗೆ ಫಲಾನುಭವಿಗಳಿಗೆ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಕೆ. ಸುರೇಶ್, ಜ್ಯೋತಿಷಕುಮಾರ ಶರ್ಮಾ, ಮುರುಗೇಶ, ಭೀಮರಾವ್, ಪ್ರಶಾಂತ ಘೋಡಕೆ, ಸತೀಶ ಬಸಗೌಡರ, ಎಸ್.ಪಿ ಮಾಂಗ್, ಸುಂಜಾತ, ಶೇಖರ ಸೌದಾಗರ, ಗಜಾನನ ಮಂಗಸೂಳಿ, ಸದಾಶಿವ ಬುಟಾಳಿ. ರಮೇಶ ಸಿಂದಗಿ, ಅಸ್ಲಮ್ ನಾಲಬಂದ, ದಿಲೀಪ ಕಾಂಬಳೆ, ಸುನಿತಾ ಐಹೊಳೆ, ಶಿವಾನಂದ ಸೌದಾಗರ, ರಾಕೇಶ್ ಸೌದಾಗರ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿಶ್ವ ಸಂಗೀತ ದಿನಾಚರಣೆ ; ಪಂಡಿತ್ ಪುಟ್ಟರಾಜ ಕವಿ ಗವಾಯಿಗಳ ಪುಣ್ಯ ಸ್ಮರಣೋತ್ಸವ ಸ್ವರಾಭಿಷೇಕ ಸಮಾರಂಭ



**ಬೆಳಗಾವಿ ವಾರ್ತೆ ಗೋಕಾಕ:** ಸ್ವರ ಸಾಧನ ಕಲಾನಿಕೇತನ (ರಿ) ಗೋಕಾಕ ಫಾಲ್ಸ್, ಸ್ವರ ಸಾಧನ ಸಂಗೀತ ವಿದ್ಯಾಲಯ ಗೋಕಾಕ ಇವರ ಆಶ್ರಯದಲ್ಲಿ ರೋಟರಿ ರಕ್ತ ಬಂಡಾರದಲ್ಲಿ ವಿಶ್ವ ಸಂಗೀತ ದಿನಾಚರಣೆ ಅಂಗವಾಗಿ ಹಾಗೂ ಪಂಡಿತ್ ಪಂಚಾಕ್ಷರಿ ಗವಾಯಿಗಳ ಮತ್ತು ಪಂಡಿತ್ ಪುಟ್ಟರಾಜ ಕವಿ ಗವಾಯಿಗಳ ಪುಣ್ಯ ಸ್ಮರಣೋತ್ಸವ ಸ್ವರಾಭಿಷೇಕ ಸಮಾರಂಭದಲ್ಲಿ 30 ವರ್ಷಗಳಿಗಿಂತ ಅಧಿಕ ಸಂಗೀತ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆಗೈದಿರುವ ಕಲಾವಿದರಿಗೆ ಸಾಧನ ತಪಸ್ವಿ ಎಂಬ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು

ಈ ಸಂದರ್ಭದಲ್ಲಿ ಕಪ್ಪರಟ್ಟಿ ಕಳ್ಳಿಗುದ್ದಿಯ ಬಸವರಾಜ ಸ್ವಾಮಿಗಳು, ಶ್ರೀ ಉದ್ದಮ್ಮ ದೇವಿ ತದ್ರೂಪಿ ರಂಗಮ್ಮ ಮಾತಾಜಿ, ಮಲ್ಲಿಕಾರ್ಜುನ ಕಲ್ಲೋಳಿ. ಸೋಮಶೇಖರ ಮಗದುಮ. ಬಸವರಾಜ್ ಖಾನಪ್ಪನವರ. ರಿಯಾಜ ಚೌಗಲಾ. ನಿರಂಜನ ಬಡಿಗೇರ. ಇಸ್ಮೈಲ್ ನದಾಫ ಡಾ. ಭುವನೇಶ್ವರಿ ಬೋವಿ ಉಪಸ್ಥಿತರಿದ್ದರು.

# ಪಶು ವೈದ್ಯಕೀಯ ಮಹಾವಿದ್ಯಾಲಯದ ಬಾಕಿ ಕಾಮಗಾರಿ ಬೇಗ ಪೂರ್ಣಗೊಳಿಸಿ : ಶಾಸಕ ಲಕ್ಷ್ಮಣ ಸವದಿ



**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಕೊಕಟನೂರ ಗ್ರಾಮದಲ್ಲಿರುವ ಬಾವುರಾವ್ ದೇಶಪಾಂಡೆ ಪಶು ವೈದ್ಯಕೀಯ ಮಹಾವಿದ್ಯಾಲಯದ ಬಾಕಿ ಉಳಿದ ಬೋಧಕರ ಕೊಠಡಿ. ವಿದ್ಯಾರ್ಥಿಗಳ ಹಾಸ್ಟೇಲ್, ಶಿಕ್ಷಕರ ವಸತಿ ನಿಲಯಗಳು, ಬೀದಿ ದೀಪ, ನೀರಿನ ವ್ಯವಸ್ಥೆ, ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿನ ಕಾಮಗಾರಿಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಶಾಸಕ ಲಕ್ಷ್ಮಣ ಸವದಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ತಾಲೂಕಿನ ಕೊಕಟನೂರು ಗ್ರಾಮದ ಹೊರವಲಯದಲ್ಲಿರುವ ಪಶು ವೈದ್ಯಕೀಯ ಮಹಾವಿದ್ಯಾಲಯದ ಸಭಾ ಭವನದಲ್ಲಿ ಶಾಸಕ ಲಕ್ಷ್ಮಣ ಸವದಿ ಅವರ ಅಧ್ಯಕ್ಷತೆಯಲ್ಲಿ ಮಹಾವಿದ್ಯಾಲಯದ ಕಾಮಗಾರಿ ಪ್ರಗತಿ ಕುರಿತು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಶೇಷ ಸಭೆ ನಡೆಸಿ ವಿವಿಧ ವಿಷಯಗಳ ಬಗ್ಗೆ ಚರ್ಚಿಸಿ ಕಾಮಗಾರಿ ಪ್ರಗತಿಯ ಬಗ್ಗೆ ಮಾಹಿತಿ ಪಡೆದು ಮಾತನಾಡುತ್ತಿದ್ದರು.

ಅಥಣಿ ಭಾಗದ ರೈತರು ಮತ್ತು ಪಶು ಪಾಲಕರಿಗೆ ಅತ್ಯಾಧುನಿಕ ಪಶು ವೈದ್ಯಕೀಯ ಸೇವೆ ಹಾಗೂ ಗುಣಮಟ್ಟದ ಶಿಕ್ಷಣ ಒದಗಿಸುವ ಉದ್ದೇಶದಿಂದ ಸರ್ಕಾರ ಪಶು ವೈದ್ಯಕೀಯ ಮಹಾವಿದ್ಯಾಲಯವನ್ನು ಸ್ಥಾಪನೆ ಮಾಡಿದೆ. ಈ ಮಹತ್ವಾಕಾಂಕ್ಷಿ ಯೋಜನೆಯ ಬಾಕಿ ಉಳಿದಿರುವ ಕಾಮಗಾರಿ ಮೂಲಸೌಕರ್ಯ ಅಭಿವೃದ್ಧಿ. ಸುಸಜ್ಜಿತ ಕಟ್ಟಡ ಕಾಮಗಾರಿ ನಿರ್ಮಾಣ ಯಾವುದೇ ಕಾರಣಕ್ಕೂ ವಿಳಂಬವಾಗಬಾರದು. ಕಾಮಗಾರಿಯ ಪ್ರತಿಯೊಂದು ಹಂತವನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಅಧಿಕಾರಿಗಳು ಕಾಮಗಾರಿಯ ಪ್ರಗತಿ ಕುರಿತು ಮಾಹಿತಿ ನೀಡಿದರು. ಕಟ್ಟಡ ನಿರ್ಮಾಣ, ಮೂಲಸೌಕರ್ಯ ಅಭಿವೃದ್ಧಿ, ಕುಡಿಯುವ ನೀರು, ವಿದ್ಯುತ್ ಹಾಗೂ ರಸ್ತೆ ಸಂಪರ್ಕ ಸೇರಿದಂತೆ ವಿವಿಧ ಕಾಮಗಾರಿಗಳು ವೇಗವಾಗಿ ನಡೆಯುತ್ತಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳಲಿವೆ ಎಂದು ಶಾಸಕ ಲಕ್ಷ್ಮಣ ಸವದಿ ತಿಳಿಸಿದರು.

ಈ ವೇಳೆ ತಹಶೀಲ್ದಾರ ಸಿದರಾಯ ಭೋಸಗಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಶಿವಾನಂದ ಕಲ್ಲಾಪೂರ, ಲೋಕೋಪಯೋಗಿ ಇಲಾಖೆಯ ಮಲ್ಲಿಕಾರ್ಜುನ ಮಗದುಮ್, ತೋಟಗಾರಿಕೆ ಇಲಾಖೆಯ ರೇಖಾ ಹಳ್ಳೂರ, ಅರಣ್ಯ ಇಲಾಖೆಯ ಅಧಿಕಾರಿಗಳು ಸೇರಿದಂತೆ ಪಶು ವೈದ್ಯಕೀಯ ಮಹಾವಿದ್ಯಾಯಲದ ಸಿಬ್ಬಂಧಿಗಳು ಉಪಸ್ಥಿತರಿದ್ದರು

## ಜಿಲ್ಲಾ ಕೌಶಲ್ಯ ಪ್ರಗತಿ ಪರಿಶೀಲನಾ ಸಭೆ

# ಬೆಳಗಾವಿ ವಿಭಾಗ ಮಟ್ಟದ ಉದ್ಯೋಗ ಮೇಳ ಆಯೋಜನೆಗೆ ತೀರ್ಮಾನ

**ಬೆಳಗಾವಿ ವಾರ್ತೆ ಧಾರವಾಡ:** ಬೆಳಗಾವಿ ವಿಭಾಗ ಮಟ್ಟದ ಉದ್ಯೋಗ ಮೇಳ ಆಯೋಜನೆ ಮಾಡುವ ಕುರಿತು ಚರ್ಚೆ ಮಾಡಲಾಗುವುದು. ಅಧಿಕಾರಿಗಳು ಅವಶ್ಯಕ ಮಾಹಿತಿಯನ್ನು ನೀಡಿದರೆ ಶೀಘ್ರದಲ್ಲೇ ಉದ್ಯೋಗ ಮೇಳ ಆಯೋಜಿಸಲು ತೀರ್ಮಾನ ಕೈಗೊಳ್ಳಲಾಗುವುದು ಎಂದು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯಕ ಅವರು ಹೇಳಿದರು.



ಜಿಲ್ಲಾಧಿಕಾರಿ ಕಚೇರಿಯ ನೂತನ ಸಭಾಂಗಣದಲ್ಲಿ ಜಿಲ್ಲಾ ಕೌಶಲ್ಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹುಬ್ಬಳ್ಳಿ ಧಾರವಾಡ ನಗರಗಳು ಕೈಗಾರಿಕಾ ಮತ್ತು ವಿದ್ಯಾ ಕೇಂದ್ರಗಳಾಗಿವೆ. ಸಾಕಷ್ಟು ಕೈಗಾರಿಕೆಗಳು ಹುಬ್ಬಳ್ಳಿ ಧಾರವಾಡಗಳಲ್ಲಿವೆ. ಸ್ಥಳೀಯ ಅಭ್ಯರ್ಥಿಗಳಿಗೆ ಉದ್ಯೋಗಾವಕಾಶಗಳನ್ನು ಒದಗಿಸುವುದು ಬಹಳ ಮುಖ್ಯವಾಗಿದೆ. ಅರ್ಹ ಅಭ್ಯರ್ಥಿಗಳು ಕೆಲಸ ಸಿಗದೇ ನಿರಾಶರಾಗಬಾರದು. ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಉದ್ಯೋಗಾಧಾರಿತ ಕೌಶಲ್ಯ ತರಬೇತಿ ನೀಡಬೇಕು ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಕೈಗಾರಿಕೋದ್ಯಮಿಗಳ ಸಭೆ ಜರುಗಿಸಲಾಗು ವುದು. ಕೈಗಾರಿಕೆಗಳಲ್ಲಿ ಅವಶ್ಯಕವಾಗಿರುವ ಕೌಶಲ್ಯಗಳನ್ನು ಅಭ್ಯರ್ಥಿಗಳಿಗೆ ತರಬೇತಿ ನೀಡಲು ಕ್ರಮ ವಹಿಸಬೇಕು. ಕೈಗಾರಿಕೆಗಳಲ್ಲಿ ಕೆಲಸ ಮಾಡುವ ಹೊಸ ಅಭ್ಯರ್ಥಿಗಳಿಗೆ ಕೆಲಸಕ್ಕೆ ಅನುಸಾರವಾಗಿ ವೇತನ ನೀಡಬೇಕಿದೆ. ಅಲ್ಲದೇ ಅಲ್ಪಾವಧಿ ಮತ್ತು ದೀರ್ಘಾವಧಿಯ ಕೆಲಸದ ಬಗ್ಗೆ ಮಾಹಿತಿ ಒದಗಿಸಬೇಕು. ಐಟಿಐ ವಿದ್ಯಾರ್ಹತೆ ಹೊಂದಿದವರಿಗೆ ಸಾಕಷ್ಟು ಉದ್ಯೋಗಾವಕಾಶಗಳು ದೊರೆಯುತ್ತಿವೆ. ಪದವೀಧರರಿಗೂ ಸಹ ಉದ್ಯೋಗಗಳು ದೊರೆಯುವಂತಾಗಬೇಕು. ಫ್ಯೂಚರ್ ಸ್ಕಿಲ್ ಯೋಜನೆಯ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ಒದಗಿಸಬೇಕಿದೆ ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಗೃಹಲಕ್ಷ್ಮಿ ಯೋಜನೆಯಂತೆ ಕೌಶಲ್ಯ ತರಬೇತಿ ಮತ್ತು ಯೋಜನೆಗಳ ಸಾಧನೆಯ ವರದಿಯನ್ನು ನೀಡಬೇಕು. ಪಾರಂಪರಿಕ ಮತ್ತು ಪ್ರಾದೇಶಿಕ ಕಲೆಗಳು ನಶಿಸಿ ಹೋಗದಂತೆ ಕ್ರಮ ವಹಿಸಬೇಕು. ನನ್ನ ವೃತ್ತಿ ನನ್ನ ಆಯ್ಕೆ ಹಾಗೂ ಕಲಿಕೆಯೊಂದಿಗೆ ಕೌಶಲ್ಯ ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಮೂಡಿಸಬೇಕು. ನಲ್ ಜಲ್ ಮಿತ್ರ ಯೋಜನೆಯಡಿ ತರಬೇತಿ ಪಡೆದವರು ಸ್ವಾವಲಂಬಿ ಜೀವನ ನಡೆಸುವಂತಾಗಬೇಕಿದೆ ಎಂದರು.

ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಮಾತನಾಡಿ, ಉದ್ಯೋಗ ಆಧಾರಿತ ತರಬೇತಿ ನೀಡುವುದು ಅಗತ್ಯವಿದೆ. ಆ ನಿಟ್ಟಿನಲ್ಲಿ ತರಬೇತಿ ಜೊತೆಗೆ ಗೌರವ ಸಂಭಾವನೆ ನೀಡಬೇಕಿದೆ. ಧಾರವಾಡದಲ್ಲಿ ಸಾಕಷ್ಟು ಅಭ್ಯರ್ಥಿಗಳು ಸರ್ಕಾರಿ ಉದ್ಯೋಗಕ್ಕೆ ತಯಾರಿ ನಡೆಸುತ್ತಿದ್ದಾರೆ. ನವಲಗುಂದದ ಅಭಿಯಾನ ಫೌಂಡೇಶನ್ ಯೋಗ ಮ್ಯಾಟ್ ತಯಾರಿ ಕುರಿತು ತರಬೇತಿ ನೀಡಲು ಮುಂದಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ನಲ್ ಜಲ್ ಮಿತ್ರ ಯೋಜನೆಯಡಿ ತರಬೇತಿ ಪಡೆದ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರ, ಟೂಲ್ ಕಿಟ್ ಹಾಗೂ ಸಮವಸ್ತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ರವೀಂದ್ರ ದ್ಯಾಬೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಕೈಗಾರಿಕೋದ್ಯಮಿಗಳು ಇತರರು ಭಾಗವಹಿಸಿದ್ದರು.

# ರಾಜ್ಯ ಸಭಾ ಸದಸ್ಯರಾದ ಡಾ. ಎಂ. ನಾಗರಾಜ್ ರವರಿಗೆ ಸನ್ಮಾನ



**ಬೆಳಗಾವಿ ವಾರ್ತೆ ಗದಗ:** ಇತ್ತೀಚೆಗೆ ಕರ್ನಾಟಕ ರಾಜ್ಯದಿಂದ ರಾಜ್ಯ ಸಭಾ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾದ ಡಾ. ಎಂ. ನಾಗರಾಜ್ ರವರಿಗೆ ಅವರ ಶಿಷ್ಯಬಳಗದ ವತಿಯಿಂದ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಡಾ. ಶರಣು ಗೋಗೇರಿ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳಾದ ಶಿವಕುಮಾರ ಕುರಿಯವರ, ವಿಜಯನಗರ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರಾದ ಸಂದೀಪ ಬೂದಿಹಾಳ, ರಮೇಶ ಸಜ್ಜಗಾರ ಮೊದಲಾದವರು ಸನ್ಮಾನಿಸುತ್ತಿರುವುದು.

# ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆಯ ಅಂಗವಾಗಿ ಜಾಗೃತಿ ಜಾಥಾ ಯಶಸ್ವಿ

**ಬೆಳಗಾವಿ ವಾರ್ತೆ ಧಾರವಾಡ:** ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆ ಅಂಗವಾಗಿ, ಹುಬ್ಬಳ್ಳಿಯಲ್ಲಿ ಬೃಹತ್ ಜಾಗೃತಿ ಜಾಥಾವನ್ನು ಜಿಲ್ಲಾಧಿಕಾರಿ ಸ್ನೇಹಲ್ ಆರ್., ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಗುಂಜನ್ ಆರ್ಯ, ಉಪ ಪೊಲೀಸ್ ಆಯುಕ್ತೆ ಶ್ರುತಿ ಎನ್.ಎಸ್., ಸಹಾಯಕ ಪೊಲೀಸ್ ಆಯುಕ್ತರು, ಹುಬ್ಬಳ್ಳಿ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ, ಹುಬ್ಬಳ್ಳಿಯ ಅಸಂಗಿ, ಅಜಯ್ ಮುದುಗಲ್, ನೀಲಿಮಾ, ಹಾಗೂ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ, ಗೋವಾ ವಲಯ ಅವರ ಸಂಯುಕ್ತ ನೇತೃತ್ವದಲ್ಲಿ, ಎಲ್ಲಾ ಔಷಧಶಾಸ್ತ್ರ ಮಹಾವಿದ್ಯಾಲಯಗಳು ಹಾಗೂ ಕೆಮಿಸ್ಟ್ ಮತ್ತು ಡ್ರಗ್ಗಿಸ್ಟ್ ಅಸೋಸಿಯೇಷನ್ ಸಹಯೋಗದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು.

ಜಾಥಾವು ಬೆಳಿಗ್ಗೆ 8 ಗಂಟೆಗೆ ತೋಳಂಕರೆ, ವಿದ್ಯಾನಗರ, ಹುಬ್ಬಳ್ಳಿಯಿಂದ ಆರಂಭಗೊಂಡು ಕಾಡಸಿದ್ಧೇಶ್ವರ ಕಲಾ ಮಹಾವಿದ್ಯಾಲಯ, ಹುಬ್ಬಳ್ಳಿಯಲ್ಲಿ ಸಮಾರೋಪಗೊಂಡಿತು.

ಈ ಜಾಥಾದಲ್ಲಿ ವಿವಿಧ ಔಷಧಶಾಸ್ತ್ರ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಆರೋಗ್ಯ ವೃತ್ತಿಪರರು, ಔಷಧ ವ್ಯಾಪಾರಿಗಳು, ಔಷಧ ನಿರೀಕ್ಷಕರು, ಪೊಲೀಸ್ ಅಧಿಕಾರಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಸಾರ್ವಜನಿಕರು ಸೇರಿದಂತೆ ಸುಮಾರು 500ಕ್ಕೂ ಹೆಚ್ಚು ಮಂದಿ ಉತ್ಸಾಹದಿಂದ ಭಾಗವಹಿಸಿದರು.




ಜಾಥೆಯ ಉದ್ದೇಶ ಮಾದಕ ದ್ರವ್ಯಗಳ ದುರ್ಬಳಕೆಯಿಂದಾಗುವ ದುಷ್ಪರಿಣಾಮಗಳು ಹಾಗೂ ಅಕ್ರಮ ಮಾದಕ ದ್ರವ್ಯ ಸಾಗಣೆಯನ್ನು ತಡೆಗಟ್ಟುವ ಅಗತ್ಯತೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದಾಗಿತ್ತು. ಭಾಗವಹಿಸಿದವರು ವಿವಿಧ ಜಾಗೃತಿ ಫಲಕಗಳನ್ನು ಪ್ರದರ್ಶಿಸಿ, ಮಾದಕ ದ್ರವ್ಯ ವಿರೋಧಿ ಘೋಷಣೆಗಳನ್ನು ಕೂಗುವ ಮೂಲಕ ಸಮಾಜಕ್ಕೆ ಬಲವಾದ ಸಂದೇಶವನ್ನು ಸಾರಿದರು.

ಶಿಕ್ಷಣ, ಜಾಗೃತಿ, ಆರಂಭಿಕ ಹಂತದಲ್ಲಿಯೇ ತಡೆಗಟ್ಟುವಿಕೆ, ಚಿಕಿತ್ಸೆ, ಪುನರ್ವಸತಿ ಹಾಗೂ ಸಮುದಾಯದ ಸಹಭಾಗಿತ್ವದ ಮೂಲಕ ಮಾದಕ ವ್ಯಸನವನ್ನು ತಡೆಗಟ್ಟುವ ಅಗತ್ಯವನ್ನು ಜಾಥೆಯಲ್ಲಿ ಒತ್ತಿಹೇಳಲಾಯಿತು. ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣದಲ್ಲಿ ನಾಗರಿಕರು, ಶಿಕ್ಷಣ ಸಂಸ್ಥೆಗಳು, ಆರೋಗ್ಯ ಇಲಾಖೆ ಮತ್ತು ಕಾನೂನು ಜಾರಿ ಸಂಸ್ಥೆಗಳ ಜವಾಬ್ದಾರಿಯನ್ನೂ ಈ ಸಂದರ್ಭದಲ್ಲಿ ಸ್ಮರಿಸಲಾಯಿತು. ಈ ಕಾರ್ಯಕ್ರಮವು ಕೇಂದ್ರ ಸರ್ಕಾರದ "ನಶಾ ಮುಕ್ತ ಭಾರತ ಅಭಿಯಾನ □ ವಿಕಸಿತ ಭಾರತದ ಗುರುತು" ಎಂಬ ಧ್ಯೇಯವಾಕ್ಯವನ್ನು ಮತ್ತೊಮ್ಮೆ ಪ್ರತಿಪಾದಿಸಿತು. ಈ ಸಂದರ್ಭದಲ್ಲಿ ಗಣ್ಯರು, ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು, ಆರೋಗ್ಯ ವೃತ್ತಿಪರರು ಹಾಗೂ ಸಾರ್ವಜನಿಕರು ನಶಾ ಮುಕ್ತ ಭಾರತ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸಿ, ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸುವಂತೆ ಕರೆ ನೀಡಿದರು. ಮಾದಕ ವ್ಯಸನಕ್ಕೆ ಸಂಬಂಧಿಸಿದ ಮಾಹಿತಿ, ಸಮಾಲೋಚನೆ ಹಾಗೂ ನೆರವಿಗಾಗಿ ಮಾನಸ್ (MANAS) ಮಾದಕ ದ್ರವ್ಯ ಸಹಾಯ ವಾಣಿ □ 1933 ಅನ್ನು ಬಳಸುವಂತೆ ಸಾರ್ವಜನಿಕರಿಗೆ ಮನವಿ ಮಾಡಲಾಯಿತು.

ಕಾರ್ಯಕ್ರಮದ ಅಂತ್ಯದಲ್ಲಿ, ಎಲ್ಲಾ ಭಾಗವಹಿಸಿದವರು ಮಾದಕ ದ್ರವ್ಯ ಮುಕ್ತ ಭಾರತ ನಿರ್ಮಾಣಕ್ಕೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸುವ ಪ್ರತಿಜ್ಞೆಯನ್ನು ಸ್ವೀಕರಿಸಿದರು.

# ಢೋಂಗಿತನ ಮಾಡುವ ಬಿಜೆಪಿಗರಿಂದ ರಾಮನ ಮಂದಿರಕ್ಕೇ ಕನ್ನ: ಅಶೋಕ ಮಂದಾಲಿ ಕಿಡಿ

**ಬೆಳಗಾವಿ ವಾರ್ತೆ ಗದಗ:** ಹಿಂದೂತ್ವ, ರಾಮನ ಹೆಸರಲ್ಲಿ ಭಕ್ತರ ಜತೆ ಆಟವಾಡುತ್ತ ಜಂಬ ಕೊಚ್ಚಿಕೊಳ್ಳುವ ಬಿಜೆಪಿಗರು ಇದೀಗ ರಾಮನ ಹೆಸರಿನಲ್ಲಿ ಬಂದ ಹಣವನ್ನೂ ಲೂಟಿ ಹೊಡೆಯುವ ಮೂಲಕ ಭಕ್ತರ ನಂಬಿಕೆಯನ್ನೂ ಲೂಟಿ ಮಾಡಿದ್ದಾರೆ. ಈ ಮೂಲಕ ರಾಮನ ಮಂದಿರಕ್ಕೇ ಕನ್ನ ಹಾಕಿದ್ದಾರೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಟೀಕಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೇಣಿಗೆ ಹಣ ಕೇವಲ ಲಕ್ಷಗಳಲ್ಲಿ ಕಾಣೆಯಾಗಿಲ್ಲ, ಬದಲಾಗಿ 4,500 ಕೋಟಿ ರೂಪಾಯಿಗೂ ಹೆಚ್ಚು ಹಣ ಲೂಟಿಯಾಗಿದೆ. ರಾಮನ ಭಕ್ತರ ಕಷ್ಟಾರ್ಜಿತ ಹಣ ಸಾವಿರಾರು ಕೋಟಿಗಟ್ಟಲೆ ಲೂಟಿಯಾಗುತ್ತಿದ್ದರೆ, ಇದರ ಹೊಣೆ ಹೊರುವ ಕನಿಷ್ಠ ನೈತಿಕತೆಯಾದರೂ ನಿಮಗಿದೆಯೇ? ಎಂದು ಪ್ರಶ್ನಿಸಿದ್ದಾರೆ.

ತಿಂಗಳಿಗೆ 20,000 ರೂಪಾಯಿ ಸಂಬಳ ಪಡೆಯುವ ಸಿಬ್ಬಂದಿ ಇದ್ದಕ್ಕಿದ್ದಂತೆ 1.5 ಕೋಟಿ ಮೌಲ್ಯದ ಆಸ್ತಿ ಖರೀದಿಸುತ್ತಿದ್ದರೂ ಗಮನಿಸದ ಬಿಜೆಪಿ ನಾಯಕರ ನಡೆ, ಅವರೇ ದೇವಸ್ಥಾನದ ಕಾಣಿಕೆಯನ್ನು ಹಂಚಿ ತಿಂದಿದ್ದಾರೆ ಎಂಬ ಮಾತಿಗೆ ಸಾಕ್ಷಿಯಾಗಿದೆ. ಬಡ ನೌಕರನಿಗೆ ಇಷ್ಟೊಂದು ಆಸ್ತಿ ಎಲ್ಲಿಂದ ಬಂತು. ರಾಮನ ಭಕ್ತರ ಪಾಲಿನ ಹಣವನ್ನು ದೋಚಲು ಬಿಜೆಪಿ ನಾಯಕರು ಕಳ್ಳರಿಗೆ ಹೇಗೆ ತರಬೇತಿ ನೀಡಿದ್ದಾರೆ ಎಂಬುದು ಈ ಬ್ಲೈಂಡ್ ಸ್ಪಾಟ್ ತಂತ್ರದಿಂದಲೇ ಜಗಜ್ಜಾಹೀರಾಗಿದೆ ಎಂದು ಕಿಡಿಕಾರಿದ್ದಾರೆ.

**ರಾಮ ಮಂದಿರದ ಕಾಣಿಕೆ ಲೂಟಿ ಪ್ರಕರಣದಲ್ಲಿ ಆರೋಪ ಹೊತ್ತಿರುವ ಸಿಬ್ಬಂದಿಗಳ ಮತ್ತು ಅವರ ಅಕ್ರಮ ಆಸ್ತಿಯ ವಿವರಗಳು:**

**ರಾಮಶಂಕರ್ ಯಾದವ್ (ಟಿನ್ನು ಯಾದವ್):** ದೇಣಿಗೆ ಪೆಟ್ಟಿಗೆಯ ಕೀಲಿಗಳ ಅಧಿಕಾರ ಹೊಂದಿದ್ದ ಈತನ ಬಳಿ ಸುಮಾರು 50 ಕೋಟಿ ರೂ. ಮೌಲ್ಯದ ಅಕ್ರಮ ಆಸ್ತಿ ಪತ್ತೆಯಾಗಿದೆ.

**ಕೆ.ಡಿ. ತಿವಾರಿ:** ಚಿನ್ನ-ಬೆಳ್ಳಿ ಆಭರಣಗಳ ತೂಕದ ಹೊಣೆ ಹೊತ್ತಿದ್ದ ಈತ, ಸುಮಾರು 5 ಕೋಟಿ ರೂ. ಮೌಲ್ಯದ ಭೂಮಿ ಮತ್ತು ಆಸ್ತಿಗಳನ್ನು ಅಕ್ರಮವಾಗಿ ಗಳಿಸಿದ್ದಾನೆ.

**ಅನುಕಲ್ಪ ಮಿಶ್ರಾ:** ದೇವಾಲಯದ ಸಿಬ್ಬಂದಿಯಾಗಿದ್ದ ಈತ ಆದಾಯಕ್ಕೆ ಮೀರಿದ ಆಸ್ತಿ ಗಳಿಸಿದ್ದು, 65 ಲಕ್ಷ ರೂ. ಮೌಲ್ಯದ ಮನೆ ಮತ್ತು ಫಾರ್ಮ್ ಹೌಸ್ ಹೊಂದಿದೆ.

**ಮನೀಶ್ ಯಾದವ್:** ನಗದು ಎಣಿಕೆ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದ ಈತನ ಮನೆಯಲ್ಲಿ ದಾಳಿ ನಡೆಸಿದಾಗ 36 ಲಕ್ಷ ರೂ. ನಗದು ಹಣ ವಶಪಡಿಸಿಕೊಳ್ಳಲಾಗಿದೆ.

**ಲವಕುಶ್ ಮಿಶ್ರಾ:** ಕಾಣಿಕೆ ಎಣಿಕೆ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದ ಈತನ ಮನೆಯಲ್ಲಿ ಅಕ್ರಮವಾಗಿ ಬಚ್ಚಿಟ್ಟಿದ್ದ 10 ಲಕ್ಷ ರೂ. ನಗದು ಪತ್ತೆಯಾಗಿದೆ.

**ರಾಜೇಶ್ ಪಾಠಕ್:** ನಗದು ಎಣಿಕೆ ತಂಡದಲ್ಲಿದ್ದ ಈತನ ಐದು ವರ್ಷಗಳ ಅಸ್ವಾಭಾವಿಕ ಆರ್ಥಿಕ ಬೆಳವಣಿಗೆಯನ್ನು ತನಿಖಾ ಸಂಸ್ಥೆಗಳು ತೀವ್ರವಾಗಿ ಪರಿಶೀಲಿಸುತ್ತಿವೆ.

ದಿನನಿತ್ಯದ ಎಸ್‌ಐಟಿ ತನಿಖೆಯ ಪ್ರಗತಿಯನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಲು ಬಿಜೆಪಿ ನಿರಾಕರಿಸಿದೆ. ಭಕ್ತರ ನಂಬಿಕೆಯನ್ನು ಅಡವಿಟ್ಟು, ತನಿಖೆಯ ರಹಸ್ಯ ಕಾಪಾಡುವ ನೆಪದಲ್ಲಿ ಇಡೀ ಹಗರಣವನ್ನು ಮುಚ್ಚಿಹಾಕುವ ನಾಟಕವಾಡುತ್ತಿದ್ದಾರೆ.

2025 ರ ಮಹಾಕುಂಭ ಮೇಳದ ಸಮಯದಲ್ಲಿ ದಿನಕ್ಕೆ 10 ಲಕ್ಷ ಭಕ್ತರು ಭೇಟಿ ನೀಡಿದಾಗ ಸಂಗ್ರಹವಾದ ನಗದನ್ನು ಬ್ಯಾಂಕ್ ಚಾನೆಲ್‌ಗಳಿಂದ ಹೊರಗಿಡಲಾಗಿದೆ. ಹರಿದುಬಂದ ಭಕ್ತಿ ನಿಧಿಯನ್ನು ಇವರು ಲೆಕ್ಕವಿಲ್ಲದ ಕಪ್ಪು ಹಣವನ್ನಾಗಿ ಬದಲಾಯಿಸಿಕೊಂಡಿದ್ದಾರೆ.

ಕೋಟ್ಯಂತರ ರೂಪಾಯಿ ನಗದು ನಿರ್ವಹಿಸುವ ಸಿಬ್ಬಂದಿಗೆ ಕನಿಷ್ಠ ಫ್ರಿಸ್ಕಿಂಗ್ ಅಥವಾ ಪಾಕೆಟ್-ಲೆಸ್ ಯೂನಿಫಾರ್ಮ್ ನಿಯಮಗಳನ್ನು ಜಾರಿ ಮಾಡಲಾಗಿಲ್ಲ. ಭದ್ರತೆಯ ಹೆಸರಿನಲ್ಲಿ ತೂತು ಬಿದ್ದ ಜರಡಿಯನ್ನಿಟ್ಟು ಇವರು ಕಳ್ಳತನಕ್ಕೆ ರತ್ನಗಂಬಳಿ ಹಾಸಿಕೊಟ್ಟಿದ್ದಾರೆ.

ದೇಗುಲದ ಕಾಣಿಕೆ ಪೆಟ್ಟಿಗೆಯಿಂದ ಬ್ಯಾಂಕ್ ಖಾತೆಗೆ ಹಣ ಸಾಗಿಸುವಾಗ ಯಾವುದೇ ಸೌಂಡ್ ಪ್ರೂಫ್ ಅಥವಾ ಜಿಪಿಎಸ್ ವಾಹನಗಳನ್ನು ಬಳಸಲಾಗಿಲ್ಲ. ಭದ್ರತಾ ವೈಫಲ್ಯದ ಮೂಲಕವೇ ಹಣ ಲೂಟಿಯಾಗಲು ಬಿಜೆಪಿ ಆಡಳಿತವೇ ಪರೋಕ್ಷ ಕಾರಣವಾಗಿದೆ.

ತನಿಖೆಯಲ್ಲಿ ಹಿರಿಯ ಅಧಿಕಾರಿಗಳು ಮತ್ತು ಟ್ರಸ್ಟ್ ಪ್ರಮುಖರನ್ನು ಬಚಾವ್ ಮಾಡಲು ಕೆಳಹಂತದ ಕ್ಲರ್ಕ್‌ಗಳನ್ನು ಬಲಿಪಶು ಮಾಡಲಾಗುತ್ತಿದೆ. ದೊಡ್ಡ ಕಳ್ಳರನ್ನು ಬಿಟ್ಟು ಗಂಟು ಕಳ್ಳನನ್ನು ಹಿಡಿಯುವ ರಾಜಕೀಯ ನಾಟಕವನ್ನು ಬಿಜೆಪಿ ಆಡುತ್ತಿದೆ.

ಯೋಗಿ ಆದಿತ್ಯನಾಥ್ ಸರ್ಕಾರದ ಆಡಳಿತದ ಮೂಗಿನ ಕೆಳಗೆಯೇ ರಾಮನ ಭಕ್ತರ ದೇಣಿಗೆಗೆ ಕನ್ನ ಬಿದ್ದಿರುವುದು ಅವರ ಆಡಳಿತದ ಸಂಪೂರ್ಣ ವೈಫಲ್ಯಕ್ಕೆ ಸಾಕ್ಷಿಯಾಗಿದೆ. ದೇವಸ್ಥಾನದ ಕಾಣಿಕೆಯನ್ನು ರಕ್ಷಿಸಲಾಗದ ಅವರು, ಮುಖ್ಯಮಂತ್ರಿ ಸ್ಥಾನದಲ್ಲಿ ಮುಂದುವರಿಯುವ ನೈತಿಕ ಹಕ್ಕನ್ನು ಕಳೆದುಕೊಂಡಿದ್ದು, ತಕ್ಷಣವೇ ರಾಜೀನಾಮೆ ನೀಡಬೇಕು ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಒತ್ತಾಯಿಸಿದ್ದಾರೆ.

## ಸ್ವತಂತ್ರ ತನಿಖೆಗೆ ಹಿಂಜರಿಕೆ ಏಕೆ?

ಗದಗ: ಜೂನ್ 23, 2026 ರಂದು ಎಸ್‌ಐಟಿ ತಂಡವು 150 ಪುಟಗಳ ಆಘಾತಕಾರಿ ವರದಿಯನ್ನು ಯುಪಿ ಗೃಹ ಕಾರ್ಯದರ್ಶಿಗೆ ಸಲ್ಲಿಸಿದರೂ ಈವರೆಗೆ ಯಾವುದೇ ಎಫ್‌ಐಆರ್ ದಾಖಲಾಗಿಲ್ಲ. ಇವರು ವರದಿಯನ್ನು ಕಪಾಟಿನಲ್ಲಿಟ್ಟು ಹಿರಿಯ ಅಧಿಕಾರಿಗಳನ್ನು ರಕ್ಷಿಸುತ್ತಿದ್ದಾರೆ. ವಿರೋಧ ಪಕ್ಷಗಳ ಮೇಲೆ ಸಿಬಿಐ ಮತ್ತು ಇಡಿ ದಾಳಿ ಮಾಡಿಸುವ ಬಿಜೆಪಿ, ಸುಪ್ರೀಂ ಕೋರ್ಟ್ ಉಸ್ತುವಾರಿಯ ಕೇಂದ್ರೀಯ ತನಿಖೆಗೆ ಹೆದರಿ ಓಡುತ್ತಿದೆ. 'ಕಳ್ಳನ ಮನಸ್ಸು ಹುಳ್ಳುಳ್ಳಗೆ' ಎನ್ನುವ ಹಾಗೆ, ತಪ್ಪು ಮಾಡದಿದ್ದರೆ ಸ್ವತಂತ್ರ ತನಿಖೆಗೆ ಒಪ್ಪಿಕೊಳ್ಳಲು ಇಷ್ಟೊಂದು ಹಿಂಜರಿಕೆ ಏಕೆ ಎಂದು ಅಶೋಕ ಮಂದಾಲಿ ಪ್ರಶ್ನಿಸಿದ್ದಾರೆ.

# ರೈತರು-ಬಡವರು-ವ್ಯಾಪಾರಿಗಳಲ್ಲಿ ಆರ್ಥಿಕ ಶಕ್ತಿ ತುಂಬುವಲ್ಲಿ ಸಂಘದ ಶ್ರಮ ಸಾರ್ಥಕ: ಡಿ.ಆರ್.ಪಾಟೀಲ



**ಬೆಳಗಾವಿ ವಾರ್ತೆ ಬೆಟಗೇರಿ:** ಹಲವಾರು ದಶಕಗಳ ಹೋರಾಟ, ಸಾಂಘಿಕ ಸಮನ್ವಯತೆ, ನಿರಂತರ ಶ್ರಮ, ಗ್ರಾಮೀಣ ಭಾಗದಲ್ಲಿ ಏನಾದರೂ ಸಾಧಿಸಬೇಕು ಎನ್ನುವ ಛಲ, ಮೂವತ್ತು ವರ್ಷಗಳ ನಿರಂತರ ಪರಿಶ್ರಮ, ನಂಜಯ್ಯನಮಠ, ಎಚ್.ವೈ. ಮೇಟಿ ಅವರಂತಹ ರಾಜಕಾರಣಿಗಳ ಒಡನಾಟ, ನೇಕಾರರ ಬದುಕಿನಲ್ಲಿ ಹೊಸಚೇತನ ತುಂಬುವ ಪ್ರಯತ್ನದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ರವೀಂದ್ರ ಕಲಬರ್ಗಿ ಅವರ ನೇತೃತ್ವದಲ್ಲಿ ಕೇವಲ ನೇಕಾರರ ಶ್ರೇಯೋಭಿವೃದ್ಧಿಗಾಗಿಯೇ ಆರಂಭಗೊಂಡ ಸಂಘ, ಮುಂದೆ ರೈತರು, ಬಡವರು, ವ್ಯಾಪಾರಿಗಳಿಗೆ ಆರ್ಥಿಕ ಶಕ್ತಿ ತುಂಬುವಲ್ಲಿ ಯಶಸ್ವಿಯಾಯಿತು ಎಂದು ಮಾಜಿ ಶಾಸಕರು ಹಾಗೂ ರಾಜ್ಯ ವಿಕೇಂದ್ರೀಕರಣ ಯೋಜನೆ ಹಾಗೂ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ಹೇಳಿದರು.

ಬೆಟಗೇರಿಯ ಶ್ರೀಗಾಯತ್ರಿ ಪತ್ತಿನ ಸಹಕಾರ ಸಂಘ ನಿಯಮಿತದ ಬೆಟಗೇರಿ-ಗದಗ ಶಾಖೆಯ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಠೇವುದಾರರ ವಿಶ್ವಾಸ, ಸಾಲಗಾರರ ಪ್ರಾಮಾಣಿಕ ಮರುಪಾವತಿ, ಸಿಬ್ಬಂದಿಯ ಕರ್ತವ್ಯ ನಿಷ್ಠೆ, ನಿರ್ದೇಶಕ ಮಂಡಳಿಯಸಹಕಾರ ಮನೋಭಾವ ಒಂದು ಸಂಸ್ಥೆಯ ಜೀವಾಳವಾಗಿದೆ. ಇದೆಲ್ಲವೂ ಶ್ರೀಗಾಯತ್ರಿ ಪತ್ತಿನ ಸಹಕಾರ ಸಂಘ ಆರ್ಥಿಕ ಪ್ರಗತಿ ಸಾಧಿಸುವುದರಲ್ಲಿ ಸಫಲವಾಗಿದೆ ಎಂದು ಅವರು ಹೇಳಿದರು. ಲಾಕರ್ ಉದ್ಘಾಟನೆಯನ್ನು ನೆರವೇರಿಸಿದ ವಿಧಾನಪರಿಷತ್ ಶಾಸಕರಾದ ಎಸ್.ವಿ. ಸಂಕನೂರ ಅವರು ಮಾತನಾಡಿ, ಆರ್ಥಿಕ ಕ್ಷೇತ್ರದ ಜೊತೆಗೆ ಶಿಕ್ಷಣ ಕ್ಷೇತ್ರದಲ್ಲಿಯೂ ಪ್ರಗತಿ ಸಾಧಿಸುತ್ತಿರುವ ರವೀಂದ್ರ ಕಲಬುರ್ಗಿ ಅವರ ಸೇವೆ ಅಮೋಘ. ಅವರ ಮೇಲಿನ ವಿಶ್ವಾಸದಿಂದ ನಲವತ್ತು ಶಾಖೆಗಳ ಅಂದಾಜು ಠೇವಣಿ 300 ಕೋಟಿ ರೂ. ದಾಟುತ್ತಿರುವುದು ಪ್ರಗತಿಯ ದ್ಯೋತಕವಾಗಿದೆ. ಸಮಾಜದಲ್ಲಿ ಸರ್ವರ ಆರ್ಥಿಗಕ ಸಂಕಷ್ಟಗಳಿಗೆ ಸ್ಪಂದಿಸುವ ಮೂಲಕ ಶ್ರೀಗಾಯತ್ರಿ ಪತ್ತಿನ ಸಹಕಾರ ಸಂಘ ಇನ್ನಷ್ಟು ಅಭಿವೃದ್ಧಿಯತ್ತ ಸಾಗಲಿ ಎಂದು ಶುಭ ಹಾರೈಸಿದರು.

ಸಮಾರಂಭದ ಉದ್ಘಾಟನೆ ನೆರವೇರಿಸಿದ ಮಾಜಿ ಶಾಸಕರು ಹಾಗೂ ಕರ್ನಾಟಕ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇದರ ಅಧ್ಯಕ್ಷರಾದ ಎಸ್.ಜಿ. ನಂಜಯ್ಯನಮಠ ಅವರು ಮಾತನಾಡಿ, ಗ್ರಾಮೀಣ ಭಾಗದ ಬಡ ಶಿಕ್ಷಕರ ಮಗ ತನ್ನ ಸಾಧನೆಯ ಮೂಲಕ ನೇಕಾರ ಕುಟುಂಬದ ನೇತಾರನಾಗಿ, ಎಲ್ಲ ವರ್ಗಗಳ ಜನರ ವಿಶ್ವಾಸ ಗಳಿಸಿರುವ ರವೀಂದ್ರ ಕಲಬುರ್ಗಿ ನನ್ನ ಅತ್ಯಂತ ಪ್ರೀತಿಯ ಶಿಷ್ಯ. ಅವನ ಏಳಿಗೆಯಲ್ಲಿ ನನ್ನದೂ ಪಾತ್ರವಿರುವುದು ಸಂತಸದ ಸಂಗತಿ. ಎಂತಹ ಕಠಿಣ ಸಂದರ್ಭದಲ್ಲಿಯೂ ಸಮಾಜದ ಏಳಿಗೆಗಾಗಿ ನನ್ನೊಂದಿಗೆ ಚರ್ಚಿಸಿ ಮಾರ್ಗದರ್ಶನ ಪಡೆಯುತ್ತಿದ್ದರು. ಅವರಿಗೆ ನಾನು ಹೇಳಿದ್ದು ಒಂದೇ, ಜನ ಏನಾದರೂ ಹೇಳಲಿ ನೀನು ನಿನ್ನ ಆತ್ಮಸಾಕ್ಷಿಗೆ ಅನುಗುಣವಾಗಿ ಜನರಿಗೆ ಒಳ್ಳೆಯದನ್ನು ಮಾಡುವಾಗ ಯಾರ ಟೀಕೆ-ಟಿಪ್ಪಣಿಗಳನ್ನು ಅಂಜಬೇಡ. ಸಮಾಜದ ಅಭಿವೃದ್ಧಿಗೆ ಪೂರಕ ಕೆಲಸ ಮಾಡು ಎಂಬ ಮಾತನ್ನು ಪಾಲಿಸಿದ್ದಾರೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶ್ರೀಗಾಯತ್ರಿ ಪತ್ತಿನ ಸಹಕಾರ ಸಂಘ ನಿಯಮಿತ ಸೂಳೇಭಾವಿ ಇದರ ಸಂಸ್ಥಾಪಕ ಅಧ್ಯಕ್ಷರಾದ ರವೀಂದ್ರ ಪಿ.ಕಲಬುರ್ಗಿ ಅವರು ಮಾತನಾಡಿ, ನಮ್ಮ ಸಂಸ್ಥೆಗೆ ಮಾಜಿ ಶಾಸಕರಾದ ಎಸ್.ಜಿ. ನಂಜಯ್ಯನಮಠ, ಮಾಜಿ ಸಚಿವರಾದ ದಿ. ಎಚ್.ವೈ. ಮೇಟಿ ಅವರ ಮಾರ್ಗದರ್ಶನ, ಹಲವಾರು ಊರುಗಳ ಗಣ್ಯರು, ಸ್ನೇಹಿತರು ಮಾರ್ಗದರ್ಶನ ನೀಡಿ ನಮ್ಮ ಸಂಘವನ್ನು ಬೆಳೆಸಿದ್ದಾರೆ. ಗದಗ-ಬೆಟಗೇರಿಯ ನೇಕಾರರು, ರೈತರು, ವ್ಯಾಪಾರಿಗಳು ಪತ್ತಿನ ಸಂಘದ ನೆರವು ಪಡೆದು ಆರ್ಥಿಕ ಅಭಿವೃದ್ಧಿ ಹೊಂದಬೇಕು ಎಂದರು.

ಬೆಟಗೇರಿ ನೀಲಕಂಠ ಮಠದ ನಾಲ್ವಡಿ ನೀಲಕಂಠ ಪಟ್ಟದಾರ್ಯ ಮಹಾಸ್ವಾಮಿಗಳು, ಕೆರೂರ ದೇವಾಂಗಮಠದ ರುದ್ರಮುನಿ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ ಶುಭ ಹಾರೈಸಿದರು. ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ. ಬೆಂಗಳೂರು ಇದರ ನಿರ್ದೇಶಕರಾದ ಡಾ.ಸಂಜಯ ಹೊಸಮಠ, ಕೃಷ್ಣಾ ರಾಮದುರ್ಗ, ಕೃಷ್ಣಾ ಬಾಪ್ರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

# ಶೂನ್ಯ ಸಂಪಾದನಮಠವು ಜನಸಾಮಾನ್ಯರ ಮಾರ್ಗದರ್ಶಿ ಕೇಂದ್ರವಾಗಿ ಹೊರಹೊಮ್ಮಿರುವುದಲ್ಲದೇ ಭಕ್ತ ವೃಂದದ ಧಾರ್ಮಿಕ ಮತ್ತು ಸಾಮಾಜಿಕ ಕೇಂದ್ರವಾಗಿ ರೂಪುಗೊಂಡಿದೆ: ಶಾಸಕ ರಮೇಶ ಜಾರಕಿಹೊಳಿ




**ಬೆಳಗಾವಿ ವಾರ್ತೆ ಗೋಕಾಕ:** ಶೂನ್ಯ ಸಂಪಾದನಮಠವು ಜನಸಾಮಾನ್ಯರ ಮಾರ್ಗದರ್ಶಿ ಕೇಂದ್ರ ವಾಗಿ ಹೊರಹೊಮ್ಮಿರುವುದಲ್ಲದೇ ಗೋ ಕಾಕ ಮತ್ತು ಸುತ್ತ-ಮುತ್ತಲಿನ ಭಕ್ತ ವೃಂ ದದ ಧಾರ್ಮಿಕ ಮತ್ತು ಸಾಮಾಜಿಕ ಕೇಂ ದ್ರವಾಗಿ ರೂಪುಗೊಂಡಿದೆ ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ರವಿವಾರದಂದು ಇಲ್ಲಿನ ಶ್ರೀಮಹಾಲಕ್ಷ್ಮೀ ಸಭಾಭವನದಲ್ಲಿ ಶೂನ್ಯ ಸಂಪಾದನಮಠದ ಪೀಠಾಧಿಪತಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳ 55ನೇ ಜನ್ಮದಿನ ನಿಮಿತ್ತ 55 ತುಲಾಭಾರ ಮತ್ತು ಗುರುವಂದನೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು ಶ್ರೀಗಳ ಮಾರ್ಗದರ್ಶನ ನಮ್ಮೆಲ್ಲರಿಗೂ ಅಗತ್ಯ ವಿದ್ದು ನಾಗರಿಕರ ಶಾಂತಿ ಮತ್ತು ಸುವ್ಯವಸ್ಥೆ ಯಿಂದ ಕೂಡಿದ ಸಹಬಾಳ್ವೆಯ ಜೀವನಕ್ಕೆ ಮಾರ್ಗದರ್ಶೀಯಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ರಾಜ್ಯಸಭಾ ಮಾಜಿ ಸದಸ್ಯ ಈರಣ್ಣ ಕಡಾಡಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ತಮ್ಮ ಪಟ್ಟಾಧಿಕಾರದ ಬಳಿಕ ಶೈಕ್ಷಣಿಕ ಸಂಸ್ಥೆಯೊಂದನ್ನು ಹುಟ್ಟು ಹಾಕಿದ್ದಲ್ಲದೇ ಸಾಂಸ್ಕೃತಿಕವಾಗಿ ಪ್ರತಿವರ್ಷ ನಿರಂತರ ಹಮ್ಮಿಕೊಳ್ಳುತ್ತ ಬಂದಿರುವ ಶರಣ ಸಂಸ್ಕೃತಿ ಉತ್ಸವ ಶ್ರೀಗಳ ಜನಪರ ಕಾಳಜಿ ಹಾಗೂ ಪರಿಶ್ರಮಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಸಾನಿಧ್ಯವನ್ನು ವಹಿಸಿ ಮಾತನಾಡಿದ ಅಂಕಲಗಿ-ಕುಂದರಗಿ ಅಡವಿಸಿದ್ಧೇಶ್ವರ ಮಠದ ಪೀಠಾಧಿಪತಿ ಶ್ರೀ ಅಮರ ಸಿದ್ಧೇಶ್ವರ ಮಹಾಸ್ವಾಮೀಜಿ ಶ್ರೀಗಳು ತಮ್ಮ ಶ್ರೀಮಠಕ್ಕೆ ಆಗಮಿಸುವ ಭಕ್ತ ವೃಂದದೊಂದಿಗೆ ಬೆರೆತು ಅವರ ಕಷ್ಟ-ಕಾರ್ಪಣ್ಯಗಳಲ್ಲಿ ಸಹಭಾಗಿಗಳಾಗಿ ಸೌಜ ನ್ಯತೆ ವ್ಯಕ್ತಪಡಿಸುವ ವಿಭಿನ್ನ ಶೈಲಿಯ ಆತ್ಮೀಯತೆ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳ ವಿಶೇಷತೆಯಾಗಿದೆ ಎಂದು ಸ್ಮರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗುರುವಂದನಾ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಈಟಿ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳ ಭಾವಚಿತ್ರದ ಅಂಚೆ ಚೀಟಿಗಳನ್ನು ರಾಜ್ಯಸಭಾ ಮಾಜಿ ಸದಸ್ಯ ಈರಣ್ಣ ಕಡಾಡಿ ಬಿಡುಗಡೆಗೊಳಿಸಿದರು. ಶ್ರೀಗಳಿಗೆ ಸದ್ಭಕ್ತರು ನಾಣ್ಯಗಳಿಂದ 55 ಪ್ರತ್ಯೇಕ ತುಲಾಭಾರಗಳನ್ನು ನಡೆಸಿಕೊಡುವ ಮೂಲಕ "ಗುರವಂದನೆ" ಸಲ್ಲಿಸದರು.

ವೇದಿಕೆಯಲ್ಲಿ ಮುಪ್ಪಯ್ಯನಮಠದ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಕಾಂಗ್ರೆಸ್ ಮುಖಂಡ ಅಶೋಕ ಪೂಜಾರಿ, ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ, ಬಸನಗೌಡ ಪಾಟೀಲ, ಲಿಂಗಾಯತ ಮಹಿಳಾ ವೇದಿಕೆ ಅಧ್ಯಕ್ಷೆ ಸೇವಂತಾ ಮುಚ್ಚಂಡಿ ಹಿರೇಮಠ, ಸಮಾರಂಭದ ಸ್ವಾಗತ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಈಟಿ, ಕಾರ್ಯದರ್ಶಿ ವಿವೇಕ ಜತ್ತಿ ಮತ್ತು ಕೋಶಾಧ್ಯಕ್ಷ ಶಂಕರ ಗೋರೋಶಿ, ಮಾತೋಶ್ರೀ ಸುವರ್ಣಾತಾಯಿ ಹೊಸಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಎಲ್ಲಾ ಮಕ್ಕಳಿಗೂ ಪೋಲಿಯೋ ಹನಿಯನ್ನು ತಪ್ಪದೇ ಹಾಕಿಸಿ: ಶಾಸಕ ರಮೇಶ ಜಾರಕಿಹೊಳಿ



ಗೋಕಾಕ: ನಗರದ ತಾಲೂಕ ಸಾರ್ವಜನಿಕ ಆಸ್ಪತ್ರೆಯಲ್ಲಿ ಪೋಲಿಯೋ ಲಸಿಕಾ ಅಭಿಯಾನಕ್ಕೆ ಶಾಸಕ ರಮೇಶ ಜಾರಕಿಹೊಳಿ ಚಾಲನೆ ನೀಡಿದರು.

**ಬೆಳಗಾವಿ ವಾರ್ತೆ ಗೋಕಾಕ:** ನಮ್ಮ ಮಕ್ಕಳ ರಕ್ಷಣೆ ನಮ್ಮ ಜವಾಬ್ದಾರಿಯಾಗಿದ್ದು ಆಗತಾನೆ ಹುಟ್ಟಿದ ಮಗುವಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಪೋಲಿಯೋ ಹನಿಯನ್ನು ತಪ್ಪದೇ ಹಾಕಿಸಬೇಕು ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ನಗರದ ತಾಲೂಕ ಸಾರ್ವಜನಿಕ (ತಾಯಿ ಮಕ್ಕಳ ಆಸ್ಪತ್ರೆ) ಆಸ್ಪತ್ರೆಯಲ್ಲಿ ರವಿವಾರದಂದು ಪೋಲಿಯೋ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, ಆರೋಗ್ಯ ಕಾರ್ಯಕರ್ತರು, ಪೋಷಕರು ಯಾವ ಮಗುವು ಹನಿಯಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕು. ನಮ್ಮ ದೇಶ ಪೋಲಿಯೋ ಮುಕ್ತವಾಗಿದ್ದು ಕೆಲವು ದೇಶಗಳಲ್ಲಿ ಇನ್ನು ಇದೆ. ಅದು ಮತ್ತೆ ಕಾಣಿಸಿಕೊಳ್ಳಬಹುದು ಹೀಗಾಗಿ ಪೋಲಿಯೋ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರು ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ತಹಶೀಲದಾರ ಡಾ.ಮೋಹನ ಭಸ್ಮೆ, ತಾಲೂಕು ಆರೋಗ್ಯ ಅಧಿಕಾರಿ ಡಾ.ಮುತ್ತಣ್ಣ ಕೊಪ್ಪದ ಸೇರಿದಂತೆ ಆರೋಗ್ಯ ಇಲಾಕೆಯ ಅಧಿಕಾರಿಗಳು, ಆರೋಗ್ಯ ಕಾರ್ಯಕರ್ತರು ಇದ್ದರು.

# ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ



**ಬೆಳಗಾವಿ ವಾರ್ತೆ ಘಟಪ್ರಭಾ:** ಮಲ್ಲಾಪೂರ ಪಿಜಿ ಘಟಪ್ರಭಾ ನಗರದ ಸರಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಮಲ್ಲಾಪೂರ ಪಿಜಿ ಘಟಪ್ರಭಾದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಸಮುದಾಯ ಆರೋಗ್ಯ ಅಧಿಕಾರಿಗಳು ಘಟಪ್ರಭಾ -2 CHO ಅಧಿಕಾರಿಯಾದ ಪುಂಡಲಿಕ ಹುಲಿಕಟ್ಟಿ ಹಾಗೂ ಕನ್ನಡ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ಡಾ.ಕೆಂಪಣ್ಣ ಚೌಕಶಿ ಜಂಟಿಯಾಗಿ ಮಕ್ಕಳಿಗೆ ಪೋಲಿಯೋ ಹನಿ ಹಾಕುವುದರ ಮುಖಾಂತರ ಚಾಲನೆ ನೀಡಿದರು.

ದ್ವೀಪ ಬೆಳಗಿಸುವುದರ ಮೂಲಕ ಮಾತನಾಡಿದ ಕರವೇ ರಾಜ್ಯಾಧ್ಯಕ್ಷರಾದ ಕೆಂಪಣ್ಣ ಚೌಕಶಿ 14 ವರ್ಷಗಳು ಮೇಲ್ಪಟ್ಟ ಪೋಲಿಯೋ ಮುಕ್ತ ರಾಷ್ಟ್ರವಾಗಿದ್ದರು ಜಗತ್ತಿನ ಕೆಲವು ಭಾಗಗಳಲ್ಲಿ ಹಾಗೂ ಭಾರತದ ನೆರೆ ರಾಷ್ಟ್ರಗಳಲ್ಲಿ ವೈಡ್ ಪೋಲಿಯೋ ವೈರಸ್ ಹರಡುವಿಕೆ ಇನ್ನು ಇರುವುದರಿಂದ ಮುನ್ನೆಚ್ಚರಿಕೆ ಕ್ರಮ ಅಗತ್ಯವಾಗಿದೆ ಇಂದಿನ ಮಕ್ಕಳಿಗೂ ಮುನ್ನೆಚ್ಚರಿಕೆ ಕ್ರಮವಾಗಿ ಪೋಲಿಯೋ ಹನಿ ಹಾಕುವುದರ ಮುಖಾಂತರ ಈ ಪೋಲಿಯೋ ತಡೆಗಟ್ಟುವಲ್ಲಿ ಕರ್ನಾಟಕ ಸರ್ಕಾರವು ಮುಂದಾಗಿದ್ದು ಇದರ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆಯರಾದ ಶಿವಲೀಲಾ ಅಕ್ಕಿವಾಟ. ಸವಿತಾ ಕಂಬಾರ. ಬಸವ ಕೆಂಚ್ಚನ್ನನವರ ಹಾಗೂ ಮಕ್ಕಳು ಪಾಲಕರು ಇದ್ದರು.

# ತುಕ್ಕಾನಟ್ಟಿ: ರಾಷ್ಟ್ರೀಯ ಪಲ್ಸ ಪೋಲಿಯೋ ಕಾರ್ಯಕ್ರಮ



ಮೂಡಲಗಿ: ತಾಲ್ಲೂಕಿನ ತುಕ್ಕಾನಟ್ಟಿ ಸರಕಾರಿ ಮಾದರಿ ಶಾಲೆಯಲ್ಲಿ ವರ್ಷದೊಳಗಿನ ಮಕ್ಕಳಿಗೆ ರಾಷ್ಟ್ರೀಯ ಪಲ್ಸ ಪೋಲಿಯೋ ಲಸಿಕಾ ಹಾಕಿ ಉದ್ಘಾಟಿಸಿದರು

**ಬೆಳಗಾವಿ ವಾರ್ತೆ ಮೂಡಲಗಿ:** ತಾಲ್ಲೂಕಿನ ತುಕ್ಕಾನಟ್ಟಿ ಸರಕಾರಿ ಮಾದರಿ ಕನ್ನಡ ಹಿರಿಯ ಪ್ರಾಥಮಿಕ ಹಾಗೂ ಉನ್ನತೀಕರಿಸಿದ ಪ್ರೌಢಶಾಲೆ ಹಾಗೂ ಆರೋಗ್ಯ ಇಲಾಖೆ, ಗ್ರಾಮ ಪಂಚಾಯತ ಆಶ್ರಯದಲ್ಲಿ ಗ್ರಾಮದಲ್ಲಿ ರವಿವಾರ ರಂದ 5 ವರ್ಷದೊಳಗಿನ ಮಕ್ಕಳಿಗೆ ರಾಷ್ಟ್ರೀಯ ಪಲ್ಸ ಪೋಲಿಯೋ ಲಸಿಕಾ ಕಾರ್ಯಕ್ರಮ ಜರುಗಿತು..

ಸರಕಾರಿ ಶಾಲೆಯ ಎಲ್. ಕೆ. ಜಿ ಮತ್ತು ಯು ಕೆಜಿ ಓದುತ್ತಿರುವ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲಾಯಿತು. ಕರ್ಯಕ್ರಮದಲ್ಲಿ ಶಾಲೆಯ ಪ್ರ.ಗು. ಎವ್ಹಿ ಗಿರೆಣ್ಣವರ. ವ್ಹಿ.ಜಿ. ತೋರಗಲ, ಅತಿಥಿ ಶಿಕ್ಷಕರಾದ ಹೊಳೆಪ್ಪಾ ಗದಾಡಿ, ಪರಮಾನಂದ ನಾಂವಿ, ಜ್ಯೋತಿ ಉಪ್ಪಾರ, ಪವಿತ್ರಾ ಬಡಿಗೇರ, ಲಕ್ಷ್ಮೀ ಖಾನಪ್ಪನವರ, ಗಂಗವ್ವಾ ಗುಬ್ಬನ್ನವರ, ಆರೋಗ್ಯ ಇಲಾಖೆಯವರು, ಶಿಕ್ಷಕರು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರು ಭಾಗವಹಿಸಿ ಭಾಗವಹಿಸಿದರು.

# ಪಲ್ಸ್ ಪೋಲಿಯೋ ಜಾಥಾ ಕಾರ್ಯಕ್ರಮಕ್ಕೆ ಚಾಲನೆ



**ಬೆಳಗಾವಿ ವಾರ್ತೆ ಅಥಣಿ:** ತಾಲೂಕಾ ಕಾನೂನು ಸೇವಾ ಸಮಿತಿ, ವಕೀಲರ ಸಂಘ ಹಾಗೂ ಆರೋಗ್ಯ ಇಲಾಖೆ ಅಥಣಿ ಇವರ ಸಂಯುಕ್ತಾಶ್ರಯದಲ್ಲಿ ಶನಿವಾರ ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಆವರಣ ದಲ್ಲಿ ಪಲ್ಸ್ ಪೋಲಿಯೋ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕಾ ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಶ್ರೀಮತಿ ಶ್ವೇತಾ ಸಿಂಗ ಅವರು ಕಾರ್ಯ ಕ್ರಮವನ್ನು ಉದ್ಘಾಟಿಸಿ ಮಾತನಾಡಿ ಪೋಲಿಯೋ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ 5 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೆ ಪೋಲಿಯೋ ಹನಿ ಹಾಕಿಸಬೇಕು ಯಾವುದೆ ಮಗು ಸಹ ಲಸಿಕೆಯಿಂದ ವಂಚಿತವಾಗ ಬಾರದು ಕಾನೂನು ಸೇವಾ ಸಮಿತಿಯು ಆರೋಗ್ಯ ಇಲಾಖೆಯೊಂ ದಿಗೆ ಕೈಜೋಡಿಸಿ ಗ್ರಾಮೀಣ ಭಾಗದಲ್ಲೂ ಈ ಬಗ್ಗೆ ವ್ಯಾಪಕ ಜನಜಾಗೃತಿ ಮೂಡಿಸುತ್ತಿದೆ ಎಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಹಿರಿಯ ಸಿವಿಲ್ ನ್ಯಾಯಾಧೀಶ ರವಿಕುಮಾರ್ ಕೆ ಅವರು ಮಾತನಾಡಿ ಮಕ್ಕಳ ಆರೋಗ್ಯ ರಕ್ಷಣೆ ನಮ್ಮ ಮೊದಲ ಆದ್ಯತೆ ಪೋಲಿಯೋ ಲಸಿಕೆ ಸುರಕ್ಷಿತ ಹಾಗೂ ಉಚಿತವಾಗಿ ಸಿಗುತ್ತದೆ ಪೋಷಕರು ಮಕ್ಕಳಿಗೆ ಲಸಿಕೆ ಹಾಕಿಸಬೇಕು ಎಂದರು.

ಇನ್ನೂ ನ್ಯಾಯಾದೀಶರಾದ ಓಂಕಾರಮೂರ್ತಿ ಎಚ್, ರವೀಂದ್ರ ಹಾವರಗಿ ಹಾಗೂ ಶ್ರೀಮತಿ ಸುನಿತಾ ಪ್ರಭಣ್ಣವರ ಅವರು ಪೋಲಿಯೋ ನಿರ್ಮೂಲನೆಯಲ್ಲಿ ಸಮಾಜದ ಪಾತ್ರದ ಕುರಿತು ಮಾತನಾಡಿದರು.

ಈ ವೇಳೆ ತಾಲೂಕಾ ಆರೋಗ್ಯಾಧಿ ಕಾರಿ ಡಾ. ಬಸಗೌಡ ಕಾಗೆ ಅಧ್ಯಕ್ಷತೆ ವಹಿಸಿ ಮಾತನಾಡಿ ಹುಟ್ಟಿನಿಂದ 5 ವರ್ಷ ದೊಳಗಿನ ಎಲ್ಲ ಮಕ್ಕಳಿಗೆ ಆಸ್ಪತ್ರೆಯಲ್ಲಿ ಹಾಗೂ ಮನೆ ಮನೆಗೆ ತೆರಳಿ ಲಸಿಕೆ ನೀಡಲಾಗುವುದು ಹಾಗೆಯೆ ಬರುವ ಸೋಮವಾರ 28 ರಂದು ಬೆಳಗ್ಗೆ 9 ಗಂಟೆಗೆ ಅಥಣಿ ಮತಕ್ಷೇತ್ರದ ಶಾಸಕ ಲಕ್ಷ್ಮಣ ಸವದಿ ಅವರು ಪಲ್ಸ ಪೋಲಿಯೋ ಕಾರ್ಯಕ್ರಮದ ಚಾಲನೆ ನಿಡಲಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಎ ಎ ಹುದ್ದಾರ ನೌಕರ ಸಂಘದ ಅಧ್ಯಕ್ಷ ರಾಮನಗೌಡ ಪಾಟೀಲ, ಅರುಣ ಯಲಗುದ್ರಿ, ಜೆ ಬಿ ಕಾಂಬಳೆ ಸೇರಿದಂತೆ ವಕೀಲರು, ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಬಳಿಕ ನ್ಯಾಯಾಧೀಶರು, ವಕೀಲರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ನಡೆಸಿದರು **ಎರಡು ಹನಿ ಜೀವದ ಗೆಲುವು** ಎಂಬ ಘೋಷಣೆಗಳನ್ನು ಕೂಗುತ್ತ ಸಾರ್ವ ಜನಿಕರಿಗೆ ಕರಪತ್ರ ಹಂಚಿ ಪೋಲಿಯೋ ಲಸಿಕೆಯ ಮಹತ್ವ ತಿಳಿಸಿಕೊಟ್ಟರು.

# ವಿದ್ಯಾರ್ಥಿಗಳು ತಾವು ಕಲಿತ ಜ್ಞಾನದ ಸದುಪಯೋಗದಿಂದ ವೃತ್ತಿಯನ್ನು ಗೌರವಿಸಿ ಕಾರ್ಯಪ್ರವೃತ್ತರಾದರೆ ಯಶಸ್ವಿಯಾಗುತ್ತಾರೆ




**ಬೆಳಗಾವಿ ವಾರ್ತೆ ಗೋಕಾಕ:** ವಿದ್ಯಾರ್ಥಿಗಳು ತಾವು ಕಲಿತ ಜ್ಞಾನದ ಸದುಪ ಯೋಗದಿಂದ ವೃತ್ತಿಯನ್ನು ಗೌರವಿಸಿ ಕಾರ್ಯಪ್ರವೃತ್ತರಾದರೆ ಯಶಸ್ವಿಯಾಗುತ್ತಿರೆಂದು ಒಂದನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶ ಮಹಾದೇವ ಖಾನಟ್ಟಿ ಹೇಳಿದರು.

ಶನಿವಾರದಂದು ನಗರದ ಶ್ರೀ ಲಕ್ಷ್ಮಣರಾವ ಜಾರಕಿಹೊಳಿ ಕಾನೂನು ಮಹಾವಿದ್ಯಾಲಯದ ಅಂತಿಮ ವರ್ಷದ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಕಾನೂನು ವಿದ್ಯಾರ್ಥಿಗಳಿಗೆ ಹೆಚ್ಚಿನ ಉದ್ಯೋಗವಕಾಶ ಮಾರ್ಗಗಳಿವೆ. ಅವಕಾಶಗಳ ಸದುಪಯೋಗಪಡಿಸಿಕೊಳ್ಳಿ. ಹಿರಿಯ ನ್ಯಾಯವಾದಿಗಳ ಮಾರ್ಗದರ್ಶನದಲ್ಲಿ ನಿರಂತರ ಅಧ್ಯಯನಶೀಲರಾಗಿರಿ. ಸಮಯಪ್ರಜ್ಞೆ, ಪ್ರಾಮಾಣಿಕತೆ ಪ್ರಯತ್ನಶೀಲರಾಗಿ ತಮ್ಮ ವೃತ್ತಿಯಲ್ಲಿ ಯಶಸ್ವಿಯಾಗಿರೆಂದು ಹಾರೈಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಹಾಗೂ ನ್ಯಾಯವಾದಿ ಸನತ ಜಾರಕಿಹೊಳಿ ವಹಿಸಿದ್ದರು.

ವೇದಿಕೆಯ ಮೇಲೆ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಸುಭಾಸ ಬಿರಾದಾರ ಪಾಟೀಲ, ಪ್ರಾಚಾರ್ಯ ಡಾ.ಜಿ ಆರ್ ನಿಡೋಣಿ, ಉಪನ್ಯಾಸಕರಾದ ಎಸ್ ಸಿ ಘಟವಾಳಮಠ, ಪಿ ಬಿ ನಿಂಬಾಳಕರ, ಪಿ ಡಿ ಕುಲಕರ್ಣಿ, ಎಮ್ ಆರ್ ಧವನ, ಎಸ್ ಎಮ್ ಮುಲ್ಲಾ, ಗುರು ಪೂಜೇರಿ, ಸೂರ್ಯಕಾಂತ ಪಾಟೀಲ, ಎಸ್ ಎಸ್ ತೇರದಾಳ ಇದ್ದರು.

# ಧರ್ಮದಿಯಾ ಫೌಂಡೇಶನ್ ವತಿಯಿಂದ ಶಾಲಾ ಮಕ್ಕಳಿಗೆ ಕಲಿಕಾ ಕಿಟ್ ವಿತರಣೆ



**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಸಂಕೋನಟ್ಟಿ ಗ್ರಾಮದ ಧರ್ಮದಿಯಾ ಫೌಂಡೇಶನ್ ವತಿಯಿಂದ ಶಾಲಾ ಮಕ್ಕಳಿಗೆ ಶಾಲಾ ಬ್ಯಾಗ್, ಬುಕ್ ಹಾಗೂ ಕಲಿಕಾ ಕಿಟ್‌ಗಳನ್ನು ವಿತರಿಸುವ ಕಾರ್ಯ ಕ್ರಮ ವನ್ನು ಅವರಖೋಡ ಗ್ರಾಮದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಿಸಿದ ಧರ್ಮದಿಯಾ ಫೌಂಡೇಶನ್ ಅಧ್ಯಕ್ಷೆ ಸವಿತಾ ಮದಭಾವಿ ಮಾತನಾಡಿ ಶಿಕ್ಷಣವೇ ಮಕ್ಕಳ ಭವಿಷ್ಯವನ್ನು ರೂಪಿಸುವ ಶಕ್ತಿಯಾಗಿದ್ದು, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸಾಮಗ್ರಿಗಳನ್ನು ಒದಗಿಸುವ ಮೂಲಕ ಅವರ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುವುದು ನಮ್ಮ ಫೌಂಡೇಷನ್ ಮುಖ್ಯ ಉದ್ದೇಶವಾಗಿದೆ ಎಂದ ಅವರು

ವಿದ್ಯಾರ್ಥಿಗಳಿಗೆ ಜೀವನದಲ್ಲಿ ಶಿಕ್ಷ ಣದ ಜತೆ ಒಳ್ಳೆಯ ಸಂಸ್ಕಾರ ಕೂಡ ಅವಶ್ಯಕ. ಇಂದಿನ ವಿದ್ಯಾರ್ಥಿಗಳು ಓದಿನ ಕಡೆ ಆಸಕ್ತಿ ವಹಿಸದೇ ಮೊಬೆಲ್ ದಾಸರಾಗುತ್ತಿದ್ದು, ಇದು ಬೇಸರದ ಸಂಗತಿಯಾಗಿದೆ. ಇದನ್ನು ತಡೆಗಟ್ಟುವಲ್ಲಿ ಹಾಗೂ ಮಕ್ಕಳಿಗೆ ಶಿಕ್ಷಣದ ಕಡೆ ಗಮನಹರಿಸುವಂತೆ ಮಾಡುವಲ್ಲಿ ಪಾಲಕರು ಹಾಗೂ ಶಿಕ್ಷಕರ ಪಾತ್ರ ಬಹುಮುಖ್ಯ ಎಂದರು.

ಈ ವೇಳೆ ನಿವೃತ್ತ ಶಿಕ್ಷಕರಾದ ಪ್ರಕಾಶ್ ಸಂಕೋನಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ ಶಿಕ್ಷಣ ಎಲ್ಲರ ಜೀವನದಲ್ಲಿ ಮಹತ್ವದ ಘಟ್ಟವಾಗಿದ್ದು. ಶಿಕ್ಷಣ ಇಲ್ಲದಿದ್ದರೆ ಬದುಕಿನಲ್ಲಿ ಏನು ಸಾಧಿಸಲು ಸಾಧ್ಯವಿಲ್ಲ.

ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಬಡ ಮಕ್ಕಳೇ ಬರುತ್ತಾರೆ. ಅವರ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಧರ್ಮದಿಯಾ ಫೌಂಡೇಶನದವರ ಈ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಆನಂತರ ಜಗನ್ನಾಥ ಸಂಕೋನಟ್ಟಿ ಮಾತನಾಡಿ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯು ಸ್ಪರ್ಧಿಯಾಗಿ ಬೆಳೆಯಬೇಕು ಶಿಕ್ಷಣ ಜಗತ್ತನ್ನು ಬದಲಾಯಿಸುವ ಅತ್ಯಂತ ಶಕ್ತಿಯುತ ಆಯುಧವಾಗಿದೆ. ನಿಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಲ್ಲಿ ಓದಿಸಿ ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಬೇಕು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನ ಶಾಲೆಯ ಎಸ್ ಡಿಎಂಸಿ ಅಧ್ಯಕ್ಷ ರಾವಸಾಬ ಪಾಟೀಲ ವಹಿಸಿದ್ದರು.

ಈ ಸಂದರ್ಭದಲ್ಲಿ ಶಾಲೆಯ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್ ಬುಕ್, ಪೆನ್, ಪೆನ್ಸಿಲ್ ಸೇರಿದಂತೆ ವಿವಿಧ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಶುಭ ಹಾರೈಸಲಾಯಿತು. ವಿದ್ಯಾರ್ಥಿಗಳು ಹಾಗೂ ಪಾಲಕರು ಧರ್ಮದಿಯಾ ಫೌಂಡೇಶನ್‌ನ ಈ ಸಮಾಜಮುಖಿ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು

ಕಾರ್ಯಕ್ರಮದಲ್ಲಿ ಎಸ್ ಬಿ ದರೂರ. ದಶರಥ ಕಾಂಬಳೆ. ಡಿ ಎಸ್ ಕಾರಾಜನಗಿ. ಲಕ್ಕಪ್ಪ ತುಬಚಿ. ನಾಯಕಪ್ಪ ಕಾಂಬಳೆ. ಸೇರಿದಂತೆ ಶಾಲೆಯ ಶಿಕ್ಷಕವೃಂದ ಹಾಗೂ ಧರ್ಮದಿಯಾ ಫೌಂಡೇಶನ್ ಸರ್ವ ಪದಾಧಿಕಾರಿಗಳು ಉಪಸ್ಥಿತರಿದ್ದರು.




**ಬೆಳಗಾವಿ ವಾರ್ತೆ ಧಾರವಾಡ:** ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆಯ ಅಂಗವಾಗಿ ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಎಲ್ಲಾ ಫಾರ್ಮಸಿ ಕಾಲೇಜುಗಳು ಹಾಗೂ ಕೆಮಿಸ್ಟ್ ಮತ್ತು ಡ್ರಗ್ಗಿಸ್ಟ್ ಅಸೋಸಿಯೇಷನ್ ಸಹಯೋಗದೊಂದಿಗೆ ಧಾರವಾಡದ ಕೆಸಿಡಿ ಕಾಲೇಜಿನಿಂದ ಜುಬಿಲಿ ಸರ್ಕಲ್ ವರೆಗೆ ಜಾಗೃತಿ ಜಾಥಾವನ್ನು ಆಯೋಜಿಸಲಾಯಿತು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001